# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
13 ಎಪ್ರಿಲ್ । ಶನಿವಾರ
13 APRIL 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 47 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26




## ದಾಖಲೆ ಇಲ್ಲದ ಸಾಗಿಸುತ್ತಿದ್ದ 1.57 ಕೋಟಿ ರೂ. ಮೌಲ್ಯದ ಚಿನ್ನಾಭರಣ ವಶ

ಚಾಮರಾಜನಗರ: ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ ಚೆಕ್ ಪೋಸ್ಟನಲ್ಲಿ ಇ–ದಾಖಲೆ ಇಲ್ಲದೆ ಸಾಗಾಣಿಕೆ ಮಾಡುತ್ತಿದ್ದ 1,57,87,000 ರೂ. ಮೌಲ್ಯದ 2 ಕೆ.ಜಿ. 170 ಗ್ರಾಂ ಚಿನ್ನಾಭರಣಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿಗಳು ಗುರುವಾರ ವಶಕ್ಕೆ ಪಡೆದಿದ್ದಾರೆ.

ಸತ್ತೇಗಾಲ ಚೆಕ್ ಪೋಸ್ಟ್ನಲ್ಲಿ ಬೆಳಗ್ಗೆ 10.45 ಗಂಟೆ ಸಮಯದಲ್ಲಿ ಬೆಂಗಳೂರಿನಿಂದ ಕೊಳ್ಳೇಗಾಲಕ್ಕೆ ಬರುತ್ತಿದ್ದ ಹುಂಡೈ ವೆನ್ಯೂ ಕಾರಿನಲ್ಲಿ ದಾಖಲೆಗಳಿಲ್ಲದೆ ಸಾಗಾಣಿಕೆ ಮಾಡುತ್ತಿದ್ದ ಕಾರ್ತಿಕ್ ಮತ್ತು ಚಿರಾಂತ್ ಎಂಬುವವ–ರಿಂದ ಚಿನ್ನಾಭರಣಗಳನ್ನು ಎಫ್.ಎಸ್.ಟಿ ತಂಡದ ಅಧಿಕಾರಿ ಎಂ. ರವಿಶಂಕರ್ ಅವರು ಜಪ್ತಿ ಮಾಡಿದ್ದಾರೆ. ಚಿನ್ನಾಭರಣ ಸಾಗಣೆ ಮಾಡುತ್ತಿದ್ದ ಬಗ್ಗೆ ವಿಚಾರಣೆ ಮಾಡಿದ ವೇಳೆ ಸ್ಪಷ್ಟ, ಸಮಂಜಸ ಉತ್ತರ ದೊರೆಯದ ಹಿನ್ನೆಲೆಯಲ್ಲಿ ಚಿನ್ನವನ್ನು ವಶಕ್ಕೆ ಪಡೆದು, ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಪ್ರಧಾನಿ ಮೋದಿ ಸರ್ಕಾರದಲ್ಲಿ ಸಂವಿಧಾನ ಸುರಕ್ಷಿತವಾಗಿಲ್ಲ: ಸಿಎಂ ಸಿದ್ದರಾಮಯ್ಯ

ಚಾಮರಾಜನಗರ: ಪ್ರಧಾನಿ ನರೇಂದ್ರ ಮೋದಿ ಅವರು ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದು, ಪ್ರಜಾಪ್ರಭುತ್ವ ವಿರೋಧಿಯಾಗಿದ್ದಾರೆ. ನರೇಂದ್ರ ಮೋದಿಯವರ ಸರ್ಕಾರದಲ್ಲಿ ಸಂವಿಧಾನ ಸುರಕ್ಷಿತವಾಗಿಲ್ಲ. ನಾವು–ನೀವು ಉಳಿಯಬೇಕಾದರೆ ಸಂವಿಧಾನ ಉಳಿಯಲೇಬೇಕು. ಸಂವಿಧಾನ ಉಳಿಯಬೇಕಾದರೆ ಕಾಂಗ್ರೆಸ್ ಗೆ ಮತ ಹಾಕಬೇಕು.

ಮುಸಲೋನಿ, ಹಿಟ್ಲರ್ ಸಿದ್ಧಾಂತದಲ್ಲಿ ಬಿಜೆಪಿ ಪಕ್ಷದವರು ನಂಬಿಕೆ ಇಟ್ಟಿದ್ದಾರೆ. ಈ ದೇಶದಲ್ಲಿ ಸಂವಿಧಾನ ಜಾರಿಯಾದಾಗ ಅದನ್ನು ವಿರೋಧಿಸಿದ್ದು ಆರ್.ಎಸ್.ಎಸ್. ಪ್ರಜಾಪ್ರಭುತ್ವ ಉಳಿಯಬೇಕಾದರೆ ಕಾಂಗ್ರೆಸ್ ಗೆಲ್ಲಲೇಬೇಕು ಎಂದು ಸಿಎಂ ಸಿದ್ದರಾಮಯ್ಯ ಕಿಡಿ ಕಾರಿದ್ದಾರೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ನಗರದಲ್ಲಿ ಆಯೋಜಿಸಿದ್ದ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು, ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರನ್ನು ಗೆಲ್ಲಿಸಿಕೊಡುವಂತೆ ಮತದಾರರಲ್ಲಿ ಸಿಎಂ ಸಿದ್ದರಾಮಯ್ಯ ಮನವಿ ಮಾಡಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರಿಗರ ಎಸ್ಸಿಎಸ್ಪಿ/ಟಿಎಸ್ಪಿ ಕಾಯ್ದೆ ತಂದು, ಜನಸಂಖ್ಯೆಗೆ ಅನುಗುಣವಾಗಿ ವೆಚ್ಚ ಮಾಡಬೇಕೆಂದು ತೀರ್ಮಾನಿಸಿದ್ದು, ಗುತ್ತಿಗೆಗಳಲ್ಲಿ ಮೀಸಲಾತಿ ತಂದಿದ್ದು, ಬಡ್ತಿಯಲ್ಲಿ ಮೀಸಲಾತಿ ತಂದಿದ್ದು ನನ್ನ



ನೇತೃತ್ವದ ಸರ್ಕಾರ.ಬಸವಾದಿ ಶರಣರ ಮೇಲೆ ನಂಬಿಕೆ ಇಟ್ಟಿರುವ ನಾವು ಬಸವಣ್ಣನವರನ್ನು ನಾಡಿನ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದೇವೆ. ಸ್ವಾಮಿನಾಥನ್ ವರದಿಯನ್ನು ಜಾರಿ ಮಾಡುತ್ತೇವೆ, ಯುವಕರಿಗೆ ಒಂದು ವರ್ಷಕ್ಕೆ ಒಂದು ಲಕ್ಷ ರೂ.ಗಳನ್ನು ಕೊಡುವ ಮಾತು ನೀಡಿದ್ದೇವೆ. ಇದಕ್ಕಾಗಿ ನ್ಯಾಯಪತ್ರವನ್ನು ಬಿಡುಗಡೆ ಮಾಡಲಾಗಿದೆ. ಅನೇಕ ಕಾರ್ಯಕ್ರಮಗಳನ್ನು ಘೋಷಣೆ ಮಾಡಲಾಗಿದೆ" ಎಂದು ಆಕ್ರೋಶ ಹೊರ ಹಾಕಿದರು.

ಸಿದ್ದರಾಮಯ್ಯನಿಗೆ ಹಿಂದೂಗಳ ಮತವೇ ಬೇಡ ಎಂದಿದ್ದಾರೆ ಎಂದು ಪುಕಾರು ಹೊರಡಿಸಿದ್ದಾರೆ. ಇಂಥ ಸುಳ್ಳುಗಾರ, ಮೋಸಗಾರರಿಗೆ ಮತ ಹಾಕಬೇಕೇ? ಲೋಕಸಭಾ ಚುನಾವಣೆಯ ನಂತರ ಗ್ಯಾರಂಟಿ ಯೋಜನೆಗಳು ನಿಲ್ಲಲಿವೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಯಾವುದೇ ಕಾರಣ–ಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ನಾವು ಕೊಟ್ಟ ಮಾತಿಗೆ ತಪ್ಪುವವರಲ್ಲ" ಎಂದು ಟೀಕೆಗೆ ತಿರುಗೇಟು ನೀಡಿದ್ದಾರೆ.

2014 ರಲ್ಲಿ ಡೀಸೆಲ್ ಬೆಲೆ ಒಂದು ಲೀಟ–ರ್‌ಗೆ 49 ರೂ.ಗಳಿತ್ತು, ಇಂದು 95 ರೂ. ಆಗಿದೆ. ಪೆಟ್ರೋಲ್ ಬೆಲೆ 71 ರೂ.ಗಳಿತ್ತು, ಈಗ 110 ರೂ. ಗಳಾಗಿದೆ. ಸಿಲಿಂಡರ್ ಬೆಲೆ 410 ರೂ. ಇದ್ದರೆ ಈಗ 950 ರೂ.ಗಳಾಗಿದೆ. ಇಡೀ ದೇಶದ ಜನರಿಗೆ ಅಚ್ಚೇ ದಿನ್ ಆಯೇಗಾ ಎಂದು ನರೇಂದ್ರ ಮೋದಿ ಹೇಳಿದ್ದರು. ಒಳ್ಳೇ ದಿನಗಳು ಬಂದವೇ? ಮೇಕ್ ಇನ್ ಇಂಡಿಯಾ ಎಂದರು, ಇಂದಿನವರೆಗೆ ಮೇಕ್ ಇನ್ ಇಂಡಿಯಾ ಆಗಲಿಲ್ಲ. ಇಂದಿಗೂ ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತಲೇ ಇದ್ದಾರೆ.ಸಬ್ ಕಾ ಸಾತ್, ಸಬ್ ಕಾ ವಿಶ್ವಾಸ್ ಎನ್ನುತ್ತಾರೆ. ಈ ದೇಶದ 140 ಕೋಟಿ ಜನರ ಅಭಿವೃದ್ಧಿ ಎಂದರು,



## ಲಕ್ಷ್ಮೀ ಕಾಂಪ್ಲೆಕ್ಸ್ ನಲ್ಲಿ ಚುನಾವಣೆ ಕಚೇರಿ ಆರಂಭಿಸಿದ ಶೆಟ್ಟರ್

ಬೆಳಗಾವಿ: ಪ್ರಧಾನಿ ನರೇಂದ್ರ ಮೋದಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಸೇರಿದಂತೆ ರಾಷ್ಟ್ರಮಟ್ಟದ ಅನೇಕ ನಾಯಕರನ್ನು ಬೆಳಗಾವಿಗೆ ಆಹ್ವಾನಿಸಲಾಗಿದೆ ಎಂದು ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಹೇಳಿದರು.

ಬೆಳಗಾವಿಯಲ್ಲಿ ಚುನಾವಣಾ ಪ್ರಚಾರ ಕಚೇರಿ ಉದ್ಘಾಟಿಸಿ ಅವರು ಮಾತನಾಡಿ, ಏಪ್ರಿಲ್ 17 ರಂದು ಮೆರವಣಿಗೆ ಮೂಲಕ ನಾನು ಅಪಾರ ಅಭಿಮಾನಿಗಳ ಜೊತೆ ತೆರಳಿ ನಾಮಪತ್ರ ಸಲ್ಲಿಸಲಿದ್ದೇವೆ. ಅಪಾರ ಸಂಖ್ಯೆಯಲ್ಲಿ ಜನ ಸೇರಲಿದ್ದು ಅನೇಕ ರಾಷ್ಟ್ರೀಯ ನಾಯಕರನ್ನು ಬೆಳಗಾವಿಗೆ ಬರುವಂತೆ ಮನವಿ ಮಾಡಿಕೊಳ್ಳಲಾಗಿದೆ. ಕೇಂದ್ರದ ಮಾಜಿ ಸಚಿವ ಬಸನಗೌಡ ಪಾಟೀಲ ಯತ್ನಾಳ ಅವರನ್ನು ಸಂಪರ್ಕಿಸಲಾಗಿದ್ದು ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಬೆಳಗಾವಿ ಅಭಿವೃದ್ಧಿಗೆ ನಾನು ಅಪಾರ ಕೆಲಸ ಮಾಡಿದ್ದೇನೆ. ಮುವತ್ತು ವರ್ಷದ ಕಾಲ ಬೆಳಗಾವಿ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಆದರೆ, ಕಾಂಗ್ರೆಸ್ ನಾಯಕರು ಮಾಡುವ ಆರೋಪದಲ್ಲಿ ಯಾವ ಹುರುಳು ಇಲ್ಲ. ಅವರ ಮಾತುಗಳಲ್ಲಿ ಯಾವುದೇ ಸತ್ಯಾಂಶ ಇಲ್ಲ. ನಾನು ಆಯ್ಕೆಯಾದರೆ ಬೆಳಗಾವಿಯ ಜನಪ್ರತಿನಿಧಿಯಾಗಿ ಕೆಲಸ ಮಾಡುವೆ ಎಂದು ತಿಳಿಸಿದರು.

ಲೋಕಸಭಾ ಚುನಾವಣೆ, ದೇಶದ ಸುಭದ್ರತೆ ವಿಚಾರವೇ ಈ ಸಲದ ಪ್ರಧಾನ ವಿಷಯವಾಗಿದೆ. ಮುಂದಿನ ಪ್ರಧಾನಿ ಯಾರಾಗಬೇಕು ಎಂಬ ವಿಚಾರದ ಮೇಲೆಯೂ ಚುನಾವಣೆ ಅವಲಂಬಿತವಾಗಿದೆ. ಹೀಗಾಗಿ ಈ ಚುನಾವಣೆಯಲ್ಲಿ ಜಾತಿ ಪ್ರಭಾವ ನಡೆಯದು. ಜಾತಿ ಹೊರತಾದ ದೇಶದ ಭದ್ರತೆ ವಿಚಾರದ ಮೇಲೆ ಚುನಾವಣೆ ನಡೆಯಲಿದೆ ಎಂದು ತಿಳಿಸಿದರು.

## ವಚನಾನಂದ ಶ್ರೀಗಳ ಮಾತನ್ನು ಗಂಭೀರವಾಗಿ ಪರಿಗಣಿಸುತ್ತೇವೆ: ಬಸವರಾಜ ಬೊಮ್ಮಾಯಿ

ಬಿಜೆಪಿಯಿಂದ ಪಂಚಮಸಾಲಿ ಸಮುದಾಯವನ್ನು ಕಡೆಗಣಿಸಲಾಗಿದೆ ಎಂದು ಹೇಳಿರುವ ಹರಿಹರ ಪಂಚಮಸಾಲಿ ಪೀಠದ ಪೀಠಾಧ್ಯಕ್ಷ ವಚನಾನಂದ ಶ್ರೀಗಳ ಮಾತನ್ನು ಗಂಭೀರವಾಗಿ ಪರಿಸಲಾಗುವುದು, ಸ್ವಾಮೀ–ಜಿಗಳ ಜೊತೆ ನಿರಂತರ ಸಂಪರ್ಕದಲ್ಲಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗದಗನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಂಚಮಸಾಲಿ ಶ್ರೀಗಳು ಸಮಾಜದ ಬಗ್ಗೆ ಕಳಕಳಿಯಿಂದ ಮಾತನಾಡಿದ್ದಾರೆ. ಅವರ ವಿಚಾರವನ್ನು ಗಂಭೀರವಾಗಿ ಪರಿಗಣಿಸುತ್ತೇವೆ. ನಾನು



ನಿರಂತರವಾಗಿ ವಚನಾನಂದ ಶ್ರೀಗಳ ಜೊತೆ ಸಂಪರ್ಕದಲ್ಲಿದ್ದೇನೆ ಎಂದು ಹೇಳಿದರು.

ಇದೇ ವೇಳೆ ಶಿರಹಟ್ಟಿ ಫಕೀರೇಶ್ವರ ಮಠದ ಶ್ರೀ ದಿಂಗಾಲೇಶ್ವರ ಶ್ರೀಗಳು ಧಾರವಾಡ ಲೋಕಸಭಾ ಕ್ಷೇತ್ತದಿಂದ ಸ್ಪರ್ಧಿಸುವ ಕು–ರಿತು ಕೇಳಿದ ಪ್ರಶ್ನೆಗೆ ಆ ಬಗ್ಗೆ ಮಾಹಿತಿ ಇಲ್ಲ ಎಂದರು.

ನನಗೆ ರಾಜ್ಯದ ಹಳ್ಳಿ–ಹಳ್ಳಿಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಬೆಂಬಲ ಸಿಗುತ್ತಿದೆ. ನನ್ನಷ್ಟು ಹಳ್ಳಿ ತಿರುಗುವವರು ಯಾರೂ ಇಲ್ಲ. ನನಗೆ ಹಳ್ಳಿಗಳ ಸಂಪರ್ಕ ಇದೆ. ಜನರ ಪ್ರೀತಿ ವಿಶ್ವಾಸ. ನನಗೂ ಪ್ರೀತಿ ಇದೆ.

ಯಾವುದೇ ಸಮಯ ವ್ಯರ್ಥ ಮಾಡದೇ ಪ್ರಚಾರ ಮಾಡುತ್ತಿದ್ದೇನೆ. ಪ್ರತಿಯೊಂದು ಗ್ರಾಮಪಂಚಾಯಿತಿ ಮಟ್ಟಕ್ಕೆ ಹೋಗಿ ಪ್ರಚಾರ ಮಾಡುತ್ತಿದ್ದೇನೆ. ಮೊದಲ ಬಾರಿಗೆ ಲೋಕಸಭಾ ಚುನಾವಣೆಯಲ್ಲಿ ಹಳ್ಳಿಹಳ್ಳಿಗಳಲ್ಲಿ ಪ್ರಚಾರವಾಗುತ್ತಿದೆ ಎಂದರು.

ಹಾವೇರಿ–ಗದಗ ಕ್ಷೇತ್ರದಲ್ಲಿ ಮೋದಿ ಅಲೆ ಇದೆ. ಪ್ರಧಾನಿ ನರೇಂದ್ರ ಮೋದಿ ಅವರ ಪ್ರಚಾರ ಬಗ್ಗೆ ಕೇಂದ್ರ ಪ್ರಚಾರ ಸಮಿತಿಯವರು ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು.

## ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ: ಬಾಂಬರ್, ಮಾಸ್ಟರ್ ಮೈಂಡ್ ಅರೆಸ್ಟ್



ಬೆಂಗಳೂರಿನ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದ ಇಬ್ಬರು ಆರೋಪಿಗಳನ್ನು ಎನ್ ಐ ಎ ತಂಡ ಪಶ್ಚಿಮ ಬಂಗಾಳದಲ್ಲಿ ಬಂಧಿಸಿದೆ.

ಬಾಂಬರ್ ಹಾಗೂ ಮಾಸ್ಟರ್ ಮೈಡ್ ಇಬ್ಬರನ್ನು ಬಂಧಿಸಲಾಗಿದೆ. ಬಾಂಬರ್ ಮುಸ್ಸಾವೀರ್ ಹುಸೇನ್ ಹಾಗೂ ಮಾಸ್ಟರ್ ಮೈಂಡ್ ಅಬ್ದುಲ್ ಮತೀನ್ ತಾಹಾ ನನ್ನು ಪಶ್ಚಿಮ ಬಂಗಾಳದಲ್ಲಿ ಬಂಧಿಸಲಾಗಿದೆ.

ಖಚಿತ ಮಾಹಿತಿ ಹಾಗೂ ಗುಪ್ತಚರ ಇಲಾಖೆಗೆ ಸಿಕ್ಕ ಸುಳಿವಿನ ಆಧಾರದಲ್ಲಿ ಇಬ್ಬರನ್ನು ಬಂಧಿಸಲಾಗಿದೆ. ಬಾಂಬರ್ ಮುಜಾವೀರ್ ಧರಿಸಿದ್ದ ಕ್ಯಾಪ್ ನಿಂದಾಗಿಯೇ ಆತನನ್ನು ಪತ್ತೆ ಮಾಡಲಾಗಿದೆ. ವಶಕ್ಕೆ ಪಡೆದಿರುವ ಇಬ್ಬರನ್ನು ಪಶ್ಚಿಮ ಬಂಗಾಳದ ಪರಗಣ ಎನ್ ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿದೆ.

## ಸೋಮವಾರ ಮೃಣಾಲ ಹೆಬ್ಬಾಳಕರ್ ನಾಮಪತ್ರ ಸಲ್ಲಿಕೆ: ಡಿ.ಕೆ.ಶಿವಕುಮಾರ ಉಪಸ್ಥಿತಿ



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಮೃಣಾಲ ಹೆಬ್ಬಾಳಕರ್ ಸೋಮವಾರ (ಏ.15) ನಾಮಪತ್ರ ಸಲ್ಲಿಸಲಿದ್ದಾರೆ.

ಅಂದು ಬೆಳಗ್ಗೆ ಸುಳೇಬಾವಿ ಮಹಾಲಕ್ಷ್ಮೀ ದೇವಸ್ಥಾನ ಮತ್ತು ಹಿಂಡಲಗಾ ಗಣಪತಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ 11 ಗಂಟೆಗೆ ಮೆರವಣಿಗೆಯಲ್ಲಿ ಆಗಮಿಸಿ ಅವರು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸುವರು.

ಉಪಮುಖ್ಯಮಂತ್ರಿಗಳೂ ಆಗಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಮೃಣಾಲ ಹೆಬ್ಬಾಳಕರ್ ನಾಮಪತ್ರ ಸಲ್ಲಿಸುವ ವೇಳೆ ಹಾಜರಿರಲಿದ್ದಾರೆ. ಭಾನುವಾರ ರಾತ್ರಿ ಮೈಸೂರಿನಿಂದ ವಿಶೇಷ ವಿಮಾನದ ಮೂಲಕ ಬೆಳಗಾವಿಗೆ ಆಗಮಿಸುವ ಶಿವಕುಮಾರ, ಸೋಮವಾರ ನಾಮಪತ್ರ ಸಲ್ಲಿಕೆಯಲ್ಲಿ ಭಾಗವಹಿಸಿ ನಂತರ ವಿಶೇಷ ವಿಮಾನದ ಮೂಲಕ ಶಿವಮೊಗ್ಗಕ್ಕೆ ತೆರಳುವರು.

ಮೃಣಾಲ ಹೆಬ್ಬಾಳಕರ್ ನಾಮಪತ್ರ ಸಲ್ಲಿಕೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇರಿದಂತೆ ಜಿಲ್ಲೆಯ ಶಾಸಕರು, ಮುಖಂಡರು, ರಾಜ್ಯದ ಇನ್ನೂ ಕೆಲವು ನಾಯಕರು ಸಹ ಪಾಲ್ಗೊಳ್ಳಲಿದ್ದಾರೆ.

# 500 ವರ್ಷಗಳ ಕನಸು ನನಸಾಗಿಸಿದ ಮೋದಿ: ಅಣ್ಣಾಸಾಹೇಬ ಜೊಲ್ಲೆ

ಅಥಣಿ: ಜಾತಿ–ಮತದ ವಿಷಬೀಜ ಬಿತ್ತುವ ಮೂಲಕ ಕಾಂಗ್ರೆಸ್ ಸಮಾಜ ಒಡೆಯುವ ಕೆಲಸ ಮಾಡುತ್ತಿದೆ. ಇದಕ್ಕೆ ಈ ಚುನಾವಣೆಯಲ್ಲಿ ಬುದ್ಧಿ ಕಲಿಸಬೇಕು' ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಹೇಳಿದರು.

ಪಟ್ಟಣದಲ್ಲಿ ಗುರುವಾರ ನಡೆದ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, 'ಪ್ರಧಾನಿ ನರೇಂದ್ರ ಮೋದಿ ಪವಾಡ ಪುರುಷ ಇದ್ದಂತೆ. 500 ವರ್ಷಗಳಿಂದ ಲಕ್ಷಾಂತರ ಕರಸೇವಕರು ಪ್ರಾಣ ಬಿಟ್ಟಿದ್ದು ರಾಮ ಮಂದಿರಕ್ಕಾಗಿ. ಎಲ್ಲ ಅಡೆತಡೆಗಳನ್ನು ಮೀರಿ ಮೋದಿ ಅವರು ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡಿದರು' ಎಂದರು.



'ಕಳೆದ ಚುನಾವಣೆಯಲ್ಲಿ ಅಥ–ಣಿ ಮತಕ್ಷೇತ್ರದಿಂದ ನನಗೆ 1.11 ಲಕ್ಷ ಮತಗಳ ಲೀಡ್ ಸಿಕ್ಕಿದೆ. ಈ ಚುನಾವಣೆಯಲ್ಲಿಯೂ ಆಶೀರ್ವಾದ ಮಾಡಬೇಕು' ಎಂದು ಮನವಿ ಮಾಡಿದರು.

'ಅಥಣಿ ಕ್ಷೇತ್ರದಲ್ಲಿ ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ರೂ25 ಕೋಟಿ ಅನುದಾನದಲ್ಲಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ, ಲೋಕೋಪಯೋಗಿ ಇಲಾಖೆ ಮೂಲಕ ರಸ್ತೆ ನಿರ್ಮಾಣ–ಕ್ಕೆ ಅನುದಾನ, ರೂ2.97 ಕೋಟಿ ಅನುದಾನದಲ್ಲಿ ಆಂಬುಲೆನ್ಸ್, ಸಿಸಿಟಿವಿ ಕ್ಯಾಮೆರಾ ಅಳವಡಿಕೆ, ಬಸ್ ಶೆಲ್ಟರ್, ಸಮುದಾಯ ಭವನ ನಿರ್ಮಾಣ ಮಾಡಿದ್ದೇನೆ. ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗಾಗಿ ರೂ4,480 ಕೋಟಿ ಅನುದಾನ ಮಂಜೂರು ಮಾಡಿಸಿದ್ದೇನೆ. ಝುಂಜರವಾಡದಲ್ಲಿ ರೂ1 ಕೋಟಿ ಅನುದಾನದಲ್ಲಿ ರಸ್ತೆ ಕಾಮಗಾರಿ ಕೈಗೊಂಡಿದ್ದೇನೆ' ಎಂದು ವಿವರಿಸಿದರು.

ಮಾಜಿ ಶಾಸಕ ಮಹೇಶ ಕುಮಠಳ್ಳಿ ಮಾತನಾಡಿ, 'ಅಣ್ಣಾಸಾಹೇಬ ಜೊಲ್ಲೆ ಅವರು ಕ್ಷೇತ್ರದಲ್ಲಿ ಸಾಕಷ್ಟು ಜನಪರ ಕಾರ್ಯಕ್ರಮ ಅನುಷ್ಠಾನ ಗೊಳಿಸಿದ್ದಾರೆ. ಶಾಸಕ ರಮೇಶ ಜಾರಕಿಹೊಳಿ ಸಹಕಾರದಿಂದ ಸುಮಾರು ರೂ1,400 ಕೋಟಿ ಅನುದಾನದ ಅಮ್ಮಾಜೇಶ್ವರಿ ನೀರಾವರಿ ಯೋಜನೆ ನನ್ನ ಅಧಿಕಾರ ಅವಧಿಯಲ್ಲಿಯೇ ಮಂಜೂರಾಗಿದೆ. ಅಥಣಿ ಮತಕ್ಷೇತ್ರದಲ್ಲಿ ಎಲ್ಲ ಗ್ರಾಮಗಳಿಗೂ ರಸ್ತೆ, ಬಾಂದಾರ, ತಡೆಗೋಡೆ ನಿರ್ಮಿಸಲಾಗಿದೆ. ಈ ಅಭಿವೃದ್ಧಿ ನೋಡಿ ಮತ ನೀಡಿ' ಎಂದರು.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ಅಪ್ಪಾಜಿಗೊಳ, ಜಿಲ್ಲಾ ಸಂಚಾಲಕ ರಾಜೇಶ ನೇರ್ಲಿ, ಜಿಲ್ಲಾ ವಿಭಾಗೀಯ ಪ್ರಭಾರಿ ಚಂದ್ರಶೇಖರ ಕವಟಗಿ, ಮಂಡಳ ಅಧ್ಯಕ್ಷ ರವಿ ಸಂಕ, ಜಿಲ್ಲಾ ಕಾರ್ಯದರ್ಶಿ ಪ್ರಭಾಕರ ಚವ್ಹಾಣ , ಮುಖಂಡರಾದ ಧರೆಪ್ಪ ಠಕ್ಕಣ್ಣವರ, ಸಿದ್ದಪ್ಪ ಮುದಕಣ್ಣವರ, ಅಪ್ಪಾಸಾಬ್ ಅವತಾಡೆ, ಸತ್ಯಪ್ಪ ಬಾಗೆನ್ನವರ, ಜಿನಗೌಡ ಪಾಟೀಲ, ಗಿರೀಶ ಬುಟಾಳಿ, ರವಿ ಪೂಜಾರಿ, ಅಭಜೀತ್ ಕೊಡಗ ಇತರರು ಇದ್ದರು.

## ಮುರಗೇಶ್ ನಿರಾಣಿಗೆ ವಾರ್ನಿಂಗ್ ನೀಡಿದ ಪಂಚಮಸಾಲಿ ಲಿಂಗಾಯತ ಮುಖಂಡರು



ಬೆಳಗಾವಿ : ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪಂಚಮಸಾಲಿ ಲಿಂಗಾಯತ ಸಮುದಾಯಕ್ಕೆ ಸೇರಿಲ್ಲ ಎಂದು ಹೇಳಿಕೆ ನೀಡಿದ ಮಾಜಿ ಸಚಿವ ಮುರಗೇಶ್ ನಿರಾಣಿ ವಿರುದ್ಧ ಗರಂ ಆಗಿರುವ ಪಂಚಮಸಾಲಿ ಮುಖಂಡರು ನಿರಾಣಿಗೆ ವಾರ್ನಿಂಗ್ ನೀಡಿದ್ದಾರೆ.

ಬೆಳಗಾವಿ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಿರಾಣಿ ಹೇಳಿಕೆ ಖಂಡಿಸಿ, ಮಾಧ್ಯಮಗೋಷ್ಠಿ ನಡೆಸಿದ ಗೌರವ ಅಧ್ಯಕ್ಷ ಆರ್‌ಕೆ ಪಾಟೀಲ್ ಆವರು ಮಾತನಾಡಿದ್ದಾರೆ.

ಮೀಸಲಾತಿ ಹೋರಾಟದಲ್ಲಿ ಹೆಬ್ಬಾಳ್ಕರ್ ಕುಟುಂಬ ಭಾಗಿಯಾಗಿದೆ. ನೀವು ಅಧಿಕಾರದಲ್ಲಿದ್ದಾಗ ನಮ್ಮ ಹೋರಾಟಕ್ಕೆ ವಿರೋಧ ಮಾಡಿದ್ದೀರಿ. ಅಧಿಕಾರಕ್ಕಾಗಿ ನಮ್ಮ ಸಮಾಜ ಒಡೆದ ಶ್ರೇಯಸ್ಸು ನಿಮಗೆ ಸಲ್ಲುತ್ತೆ. ಚನ್ನಮ್ಮ ಆಸ್ಥಾನದಲ್ಲಿ ಮಲ್ಲಪ್ಪ ಶೆಟ್ಟಿ ಇದ್ರು. ಈಗ ಸಮಾಜ ವಿರೋಧಿ ಕೆಲಸ ಮಾಡುತ್ತಿದ್ದು, ಈಗಿನ ಮಲ್ಲಪ್ಪ ಶೆಟ್ಟಿ ಎಂದು, ನಿರಾಣಿ ಅವರನ್ನು ಮಲ್ಲಪ್ಪ ಶೆಟ್ಟಿಗೆ ಹೋಲಿಸಿದ್ದಾರೆ. ಶ್ರೀಗಳಿಗೆ ಏನೇನೋ ದಾಖಲೆ ಇವೆ ಎಂದು ಬ್ಲ್ಯಾಕ್ ಮೇಲ್ ಮಾಡುತ್ತಿದ್ದೀರಿ. ಶ್ರೀಗಳ ಬಗ್ಗೆ ಮಾತನಾಡಿದ್ರೇ ಸಮಾಜದಿಂದ ತಕ್ಕ ಪಾಠ ಕಲಿಸುತ್ತೇವೆ. ಗುರುಗಳ ಬಗ್ಗೆ ಬ್ಲ್ಯಾಕ್ ಮೇಲ್ ತಂತ್ರ ಅನುಸರಿಸಿದ್ರೆ, ಇದರ ಪರಿಣಾಮ ಎದುರಿಸಬೇಕಾಗುತ್ತದೆ. ಮೀಸಲಾತಿಗಾಗಿ ಶ್ರೀಗಳು ನಿರಂತರವಾಗಿ ಹೋರಾಟ ಮಾಡುತ್ತಿದ್ದಾರೆ. ಚುನಾವಣೆ ಸಮಯದಲ್ಲಿ ಇಲ್ಲ ಸಲ್ಲದ ಜಾತಿ ವಿಷಯ ಎತ್ತಿ ಗೌರವಕ್ಕೆ ಧಕ್ಕೆ ತರುತ್ತಿದ್ದೀರಿ. ಪದೇ ಪದೇ ನಮ್ಮ ಸಮಾಜವನ್ನು ಎಳೆದು ತರಬೇಡಿ ಎಂದು ನಿರಾಣಿಗೆ ವಾರ್ನಿಂಗ್ ನೀಡಿದ್ದಾರೆ.

## ರಾಮನಗರಲ್ಲಿ 30 ಕೆಜಿಗೂ ಅಧಿಕ ಪ್ರಮಾಣದ ಚಿನ್ನ; ದಾವಣಗೆರೆಯಲ್ಲಿ 12.50 ಕೋಟಿ ರೂ. ಮೌಲ್ಯದ ಚಿನ್ನಾಭರಣ, ವಜ್ರ ಜಪ್ತಿ



ರಾಮನಗರ: ಚುನಾವಣೆ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಫುಲ್ ಅಲರ್ಟ್ ಆಗಿರುವ ಚುನಾವಣಾಧಿಕಾ–ರಿಗಳು ದಾಖಲೆಯಿಲ್ಲದೇ ಸಾಗಿಸುತ್ತಿದ್ದ ಕೋಟಿ ಕೋಟಿ ರೂ. ಬೆಲೆ ಬಾಳುವ ಚಿನ್ನ, ವಜ್ರ ಆಭರಣವನ್ನು ಜಪ್ತಿ ಮಾಡಿದ್ದಾರೆ. ರಾಮನಗರ, ದಾವಣಗೆರೆ ಜಿಲ್ಲೆಗಳಲ್ಲಿ ನಡೆದ ಪ್ರತ್ಯೇಕ ಪ್ರಕರಣಗಳಲ್ಲಿ ಕೋಟ್ಯಂತರ ರೂ. ಮೌಲ್ಯದ ಚಿನ್ನಾಭರಣ , ಕಚ್ಚಾ ಚಿನ್ನ ಹಾಗೂ ವಜ್ರಗಳನ್ನ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ರಾಮನಗರದ ಹೆಜ್ಜಾಲ ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ, 30 ಕೆಜಿಗೂ ಹೆಚ್ಚು ಚಿನ್ನ, 10 ಕೆಜಿಯಷ್ಟು ಬೆಳ್ಳಿಯನ್ನ ಚುನಾವಣಾಧಿಕಾರಿಗಳು ಜಪ್ತಿ ಮಾಡಿದ್ದಾರೆ. ಬೆಂಗಳೂರಿನಿಂದ ಮೈಸೂರಿಗೆ ತೆರಳುತ್ತಿದ್ದ ವಾಹನಗಳನ್ನು ತಪಾಸಣೆ ನಡೆಸುತ್ತಿದ್ದ ವೇಳೆ ಮಲಬಾರ್ ಗೋಲ್ಡ್ & ಡೈಮಂಡ್ ಕಂಪನಿಗೆ ಸೇರಿದ್ದು ಎನ್ನಲಾದ ವಾಹನದಲ್ಲಿ ಚಿನ್ನ, ಬೆಳ್ಳಿ ಪತ್ತೆಯಾಗಿದೆ. ಸೂಕ್ತ ದಾಖಲೆ ಇಲ್ಲದಿದ್ದರಿಂದ ಅಧಿಕಾರಿಗಳು ಚಿನ್ನವನ್ನ ಜಪ್ತಿ ಮಾಡಿದ್ದಾರೆ. ಸೂಕ್ತ ದಾಖಲೆ ತೋರಿಸಿ, ಹಿಂಪಡೆದುಕೊಳ್ಳುವಂತೆ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ದಾವಣಗೆರೆಯಲ್ಲಿ 12.50 ಕೋಟಿ ರೂ. ಮೌಲ್ಯದ ಚಿನ್ನಾಭರಣ ಸೀಜ್: ಮತ್ತೊಂದು ಪ್ರಕರಣದಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 12.50 ಕೋಟಿ ರೂ. ಮೌಲ್ಯದ ಚಿನ್ನ ಹಾಗೂ ವಜ್ರವನ್ನು ದಾವಣಗೆರೆಯ ನಗರದ ಲೋಕಿಕೆರೆ ಚೆಕ್‌ಪೋಸ್ಟ್ ಬಳಿ ವಶಕ್ಕೆ ಪಡೆದಿದ್ದಾರೆ. ವಿವಿಧ ಆಭರಣ ಅಂಗಡಿಗಳಿಗೆ ಸಾಗಿಸುತ್ತಿದ್ದ ಚಿನ್ನಾಭರಣವನ್ನು ಸೂಕ್ತ ದಾಖಲೆಗಳಿಲ್ಲದ ಕಾರಣ ವಶಕ್ಕೆ ಪಡೆಯಲಾಗಿದೆ. ಚುನಾವಣಾ ಅಧಿಕಾರಿ ರೇಣುಕಾ, ಕಮರ್ಷಿಯಲ್ ಟ್ಯಾಕ್ಸ್ ನ ಇಲಾಖೆ ಉಪ ಆಯುಕ್ತ ಮಂಜುನಾಥ್ ನೇತೃತ್ವದಲ್ಲಿ ಜಪ್ತಿ ಮಾಡಲಾಗಿದೆ.



## ಜಿಲ್ಲೆಯ ವಿವಿಧೆಡೆ ಮಳೆ: ಕಾರಿನ ಮೇಲೆ ಬಿದ್ದ ಮರ

ಬೆಳಗಾವಿ: ನಗರ ಹಾಗೂ ತಾಲ್ಲೂಕಿನ ವಿವಿಧೆಡೆ ಶುಕ್ರವಾರ ಒಂದು ತಾಸಿನವರೆಗೆ ಉತ್ತಮ ಮಳೆ ಸುರಿಯಿತು. ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣವಿತ್ತು. ಸಂಜೆ 5ರ ಸುಮಾರಿಗೆ ಆರಂಭವಾದ ಮಳೆ ಮಿಂಚಿನ ಜತೆಗೆ ಸುರಿಯಿತು.

ಇಲ್ಲಿನ ಅನಗೋಳ ಪ್ರದೇಶದಲ್ಲಿರುವ ಸಂತ ಮೀರಾ ಶಾಲೆಯ ಬಳಿ ಮಳೆ, ಗಾಳಿಯ ರಭಸಕ್ಕೆ ಮರವೊಂದು ಬುಡಸಮೇತ ಕಿತ್ತು ಕಾರಿನ ಮೇಲಿ ಬಿದ್ದಿದೆ. ಕಾರು ಜಖಂಗೊಂಡಿದ್ದು ಯಾವುದೇ ಜೀವ ಹಾನಿ ಸಂಭವಿಸಿಲ್ಲ.

## ದಾಖಲೆ ಇಲ್ಲದ ರೂ 1.50 ಲಕ್ಷ ನಗದು ವಶ



ಮೂಡಲಗಿ: ತಾಲ್ಲೂಕಿನ ಹಳ್ಳೂರ ಕ್ರಾಸ್ ಬಳಿಯ ಚೆಕ್‌ಪೋಸ್ಟ್‌ನಲ್ಲಿ ವಾಹನವೊಂದರಲ್ಲಿ ಸಾಗಿಸುತ್ತಿದ್ದ ದಾಖಲೆ ಇಲ್ಲದ ರೂ 99 ಸಾವಿರ ಮತ್ತು ಇನ್ನೊಂದು ವಾಹನದಲ್ಲಿ ಸಾಗಿಸುತ್ತಿದ್ದ ರೂ 51 ಸಾವಿರ ಸೇರಿ ಒಟ್ಟು ರೂ 1.50 ಲಕ್ಷ ಹಣವನ್ನು ಎಸ್‌ಎಸ್‌ಟಿ ತಂಡ ಶುಕ್ರವಾರ ವಶಕ್ಕೆ ಪಡೆದಿದೆ.

ಪೊಲೀಸ್ ಸಿಬ್ಬಂದಿ ಎಂ.ವಿ. ಮುರನಾಳ, ಆನಂದ ಗೌಡರ, ಎಸ್‌ಎಸ್‌ಟಿ ತಂಡದ ಉದಯಕುಮಾರ ಬೆಳ್ಳುಂಡಗಿ, ಶ್ರವಣಕುಮಾರ ಹುಬ್ಬಳ್ಳಿ, ಬಸಪ್ಪ ಪಾಟೀಲ ಅವರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಯಾದವಾಡ: ತಾಲ್ಲೂಕಿನ ಯಾದವಾಡ ಬಳಿಯ ಚೆಕ್‌ಪೋಸ್ಟ್‌ದಲ್ಲಿ ಪ್ರತ್ಯೇಕ ಎರಡು ವಾಹನಗಳಲ್ಲಿ ಸಾಗಿಸುತ್ತಿದ್ದ ರೂ 1.20 ಲಕ್ಷ ಹಣವನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಎಫ್‌ಎಸ್‌ಟಿ ಸಿಬ್ಬಂದಿ ಎಚ್.ಎಲ್. ಬಸಳಿಗುಂದಿ, ಎಚ್.ಬಿ. ಝುರೆ, ಎಸ್. ಆರ್.ದೇವರ, ಎಸ್. ಮಳ್ಳಪ್ಪಗೊಳ, ಪಿ. ತೊಂಡಿಕಟ್ಟಿ ಅವರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# 2 ವೋಟಿಗಾಗಿ ಕಾಡು ಹಾದಿಯಲ್ಲಿ 107 ಕಿಮೀ ಸಾಗಿದ ಅಧಿಕಾರಿಗಳು

ಮುಂಬೈ: ಲೋಕಸಭಾ ಚುನಾವಣೆಗೆ ಕೇವಲ 2 ಮತಕ್ಕಾಗಿ ಚುನಾವಣಾ ಅಧಿಕಾರಿಗಳು 107 ಕಿಲೋಮೀಟರ್ ದೂರ ಕಾಡು ಹಾದಿಯಲ್ಲಿ ಸಾಗಿರುವ ಘಟನೆ ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯಲ್ಲಿ ನಡೆದಿದೆ.

ಚುನಾವಣೆಗೆ ಇಬ್ಬರು ವೃದ್ಧರು ತಮ್ಮ ಮನೆಯಿಂದಲೇ ಮತ ಚಲಾಯಿಸುವುದಕ್ಕೆ ಅನುವು ಮಾಡಿಕೊಡಲು ಅಧಿಕಾರಿಗಳು ಕಾಡು ಹಾದಿಯಲ್ಲಿ 107 ಕಿ.ಮೀ ಸಾಗಿದ್ದಾರೆ.

ಏ.19 ರಿಂದ ಮೊದಲ ಹಂತದ ಮತದಾನ ನಡೆಯಲಿದೆ. ಹಿರಿಯ ನಾಗರಿಕರಿಗೆ ಮನೆಯಿಂದಲೇ ಮತ



ಚಲಾವಣೆಗೆ ಅವಕಾಶವಿದ್ದು, ಇನ್ನೇನೂ ಮತದಾನ ಆರಂಭವಾಗಲಿದೆ.

ಹೀಗಾಗಿ, ಗಡ್ಚಿರೋಲಿ–ಚಿಮೂರ್ ಕ್ಷೇತ್ರದಿಂದ 100 ಮತ್ತು 86 ವರ್ಷ ವಯಸ್ಸಿನ ಇಬ್ಬರು ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ.

ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ 85 ವರ್ಷಕ್ಕಿಂತ ಮೇಲ್ಪಟ್ಟವರು ಮತ್ತು 40% ಕ್ಕಿಂತ ಹೆಚ್ಚು ಅಂಗವೈಕಲ್ಯ ಹೊಂದಿರುವ ವ್ಯಕ್ತಿಗಳು ಮನೆಯಿಂದಲೇ ಮತ ಚಲಾಯಿಸುವ ಅವಕಾಶವನ್ನು ಚುನಾವಣಾ ಆಯೋಗವು ನೀಡಿದೆ.



## ಶಿವಮೊಗ್ಗದಿಂದ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ ಈಶ್ವರಪ್ಪ

ಶಿವಮೊಗ್ಗ: ಪುತ್ರನಿಗೆ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡಿರುವ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ, ಇದೀಗ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿದಿದ್ದಾರೆ.

ಶುಕ್ರವಾರ (ಏಪ್ರಿಲ್ 12) ತಮ್ಮ ಅಪಾರ ಬೆಂಬಲಿರೊಂದಿಗೆ ಶಿವಮೊಗ್ಗ ಜಿಲ್ಲಾಧಿಕಾರಿ ಕಚೇರಿ ವರೆಗೆ ರೋಡ್ ಶೋ ಮೂಲಕ ತೆರಳಿ ನಾಮಪತ್ರ ಸಲ್ಲಿಸಿದರು.

ಇನ್ನು ಈಶ್ವರಪ್ಪ ಅವರು ಒಟ್ಟು ಆಸ್ತಿ ಮೌಲ್ಯ 98 ಕೋಟಿ 92 ಲಕ್ಷದ 20 ಸಾವಿರ ಇದೆ ಎಂದು ಘೋಷಣೆ ಮಾಡಿಕೊಂಡಿದ್ದಾರೆ. ಅಲ್ಲದೇ ತಮ್ಮ ಪತ್ನಿ ಜಯಲಕ್ಷ್ಮಿ ಹೆಸರಿನಲ್ಲಿ 35 ಕೋಟಿ 50 ಲಕ್ಷದ 20 ಸಾವಿರ ಮೌಲ್ಯದ ಆಸ್ತಿ ಇದೆ ಎಂದು ಅಫಿಡೆವಿಟ್ನಲ್ಲಿ ಘೋಷಿಸಿಕೊಂಡಿದ್ದಾರೆ.

# ಪಕ್ಷೇತರ ಅಭ್ಯರ್ಥಿಯಾಗಿ ದಿಂಗಾಲೇಶ್ವರ ಶ್ರೀ ಸ್ಪರ್ಧೆ ಖಚಿತ

ಧಾರವಾಡ: ರಾಜ್ಯದಲ್ಲಿ ಎರಡನೇ ಹಂತದಲ್ಲಿ ಮತದಾನ ನಡೆಯಲಿರುವ ಕ್ಷೇತ್ರಗಳ ಪೈಕಿ ಹೆಚ್ಚು ಸುದ್ದಿಯಾಗುತ್ತಿರುವುದು ಧಾರವಾಡ ಲೋಕಸಭಾ ಕ್ಷೇತ್ರ. ಧಾರವಾಡದಿಂದ ಪಕ್ಷೇತರ ಅಭ್ಯರ್ಥಿಯಾಗಿ ಫಕೀರೇಶ್ವರ ಮಠದ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧಿಸುವುದಾಗಿ ಘೋಷಿಸಿದ್ದಾರೆ.

ಧಾರವಾಡ ಲೋಕಸಭಾ ಕ್ಷೇತ್ರಕ್ಕೆ ಈಗಾಗಲೇ ಕಾಂಗ್ರೆಸ್, ಬಿಜೆಪ ಅಭ್ಯರ್ಥಿ ಘೋಷಿಸಿವೆ.

ಬಿಜೆಪಿ ಹಾಲಿ ಸಂಸದ ಹಾಗೂ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರಿಗೆ ಟಿಕೆಟ್ ನೀಡಿದೆ. ಕಾಂಗ್ರೆಸ್ ವಿನಯ್ ಅಸೂಟಿ ಅವರನ್ನು ಕಣಕ್ಕಿಳಿಸಿದೆ.

ಹೀಗಾಗಿ ಎರಡು ಪಕ್ಷಗಳ ಮಧ್ಯೆಯಿದ್ದ ಸ್ಪರ್ಧೆ ದಿಂಗಾಲೇಶ್ವರ ಶ್ರೀ ಪ್ರವೇಶದಿಂದಾಗಿ ತ್ರಿಕೋನ ಸ್ಪರ್ಧೆಯಾಗಿ ಮಾರ್ಪಟ್ಟಿದೆ.

ಧಾರವಾಡ ಲೋಕಸಭಾ ಕ್ಷೇತ್ರದಿಂದ



ದಿಂಗಾಲೇಶ್ವರ ಶ್ರೀ ಸ್ಪರ್ಧೆಯಿಂದ ಯಾರಿಗೆ ಲಾಭ..? ಯಾರಿಗೆ ನಷ್ಟ..? ಎಂಬುದೇ ದೊಡ್ಡ ಪ್ರಶ್ನೆಯಾಗಿದೆ. ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆಯಿಂದ ಲಿಂಗಾಯತ ಮತ ಬ್ಯಾಂಕ್ ಒಡೆದು, ಬಿಜೆಪಿ ಅಭ್ಯರ್ಥಿ ಪ್ರಲ್ಹಾದ್ ಜೋಶಿ ಸಂಕಷ್ಟಕ್ಕೆ ಒಳಗಾಗುತ್ತಾರೆ ಎನ್ನಲಾಗಿತ್ತು. ಆದರೆ, ಈಗ ಅದು ಉಲ್ಟಾ ಆಗುತ್ತಿದ್ದು, ಕಾಂಗ್ರೆಸ್ ಪಕ್ಷವನ್ನೇ ಆತಂಕಕ್ಕೆ ನೂಕುವಂತಿದೆ.

ದಿಂಗಾಲೇಶ್ವರ ಶ್ರೀಗಳ ಸ್ಪರ್ಧೆ ಬಗ್ಗೆ ಪ್ರಹ್ಲಾದ್ ಜೋಶಿ ಯಾವುದೇ ಪ್ರತಿಕ್ರಿಯೆ ನೀಡುತ್ತಿಲ್ಲ. ಈ ವಿಷಯಕ್ಕೆ ಪ್ರತಿಕ್ರಿಯಿಸುವುದಿಲ್ಲ ಎಂದು ಅವರೇ ಹೇಳಿದ್ದಾರೆ. ಜೊತೆಗೆ ಗಂಭೀರವಾಗಿ ಪರಿಗಣಿಸಿಲ್ಲ ಎಂಬಂತೆ ನಡೆದುಕೊಳ್ಳುತ್ತಿದ್ದಾರೆ.

ಆದರೆ, ಹೊಸ ಅಪ್‌ಡೇಟ್‌ನಲ್ಲಿ ದಿಂಗಾಳೇಶ್ವರ ಸ್ವಾಮೀಜಿ ಸ್ಪರ್ಧೆಯಿಂದ ಕಾಂಗ್ರೆಸ್ ವೋಟ್ ಬ್ಯಾಂಕ್‌ಗೆ ಹೊಡೆತ ಬೀಳಲಿದೆ.

ಸೌಹಾರ್ದತೆಯ ಪ್ರತೀಕವಾಗಿರುವ ಶಿರಹಟ್ಟಿಯ ಖ್ಯಾತ ಫಕೀರೇಶ್ವರ ಮಠಕ್ಕೆ ಅತಿ ಹೆಚ್ಚು ಭಕ್ತರಿರುವುದು ತಳಸಮುದಾಯದವರು. ಕಾಂಗ್ರೆಸ್‌ಗೂ ಹೆಚ್ಚಾಗಿ ಮತ ಹಾಕುವುದು ಇದೇ ಸಮುದಾಯದವರು. ಇವರ ಜೊತೆಗೆ ನದಾಫ್ ಸಮುದಾಯ ಅಂದರೆ ಪಿಂಜಾರರ ಮತಗಳನ್ನು ದಿಂಗಾಲೇಶ್ವರ ಸ್ವಾಮೀಜಿ ಸೆಳೆಯಲಿದ್ದಾರೆ. ಜಂಗಮ ಲಿಂಗಾಯತ ಮತಗಳು ಸಹ ದಿಂಗಾಲೇಶ್ವರ ಶ್ರೀಗಳ ಪಾಲಾಗಬಹುದು.

ಇನ್ನು, ಧಾರವಾಡದಲ್ಲಿ ಲಿಂಗಾಯತ ಸಮುದಾಯಕ್ಕೆ ಅವಕಾಶ ನೀಡಬೇಕೆಂಬ ಬೇಡಿಕೆಗೆ ಬಿಜೆಪಿ ಸ್ಪಂದಿಸಿಲ್ಲ ಎಂದು ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆಗೆ ನಿರ್ಧರಿಸಿದ್ದಾರೆ.

ಹೀಗಾಗಿ ಅವರನ್ನೇ ಕಾಂಗ್ರೆಸ್ ತನ್ನ ಅಭ್ಯರ್ಥಿಯಾನ್ನಾಗಿಸಿದರೇ ಪಕ್ಷಕ್ಕೆ ಅನುಕೂಲವಾಗಲಿದೆ ಎಂಬುದು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅಭಿಪ್ರಾಯ. ಆದರೆ, ಇದಕ್ಕೆ ಸಿಎಂ ಸಿದ್ದರಾಮಯ್ಯ ಒಪ್ಪಿಗೆ ಸೂಚಿಸಿಲ್ಲ.

ಕಾಂಗ್ರೆಸ್ ನಾಯಕರ ಸಂಪರ್ಕದಲ್ಲಿ ದಿಂಗಾಲೇಶ್ವರ ಸ್ವಾಮೀಜಿಗಳು ಇದ್ದಾರೆ ಎನ್ನುವ ಚರ್ಚೆ ರಾಜ್ಯ ರಾಜಕೀಯದಲ್ಲಿ ನಡೆಯುತ್ತಿದೆ. ಡಿ ಕೆ ಶಿವಕುಮಾರ್ ಕೂಡ ಇದಕ್ಕೆ ಒಂದು ರೀತಿಯಲ್ಲಿ ಒಪ್ಪಿಗೆ ಸೂಚಿಸಿದ್ದಾರೆ.

ಆದರೆ, ಸಾಮಾಜಿಕ ನ್ಯಾಯ ಮತ್ತು ಜಾತಿ ಸಮೀಕರಣದ ಲೆಕ್ಕಾಚಾರದಲ್ಲಿ ಹಿಂದುಳಿದ ವರ್ಗದ (ಕುರುಬ) ವಿನೋದ್ ಅಸೂಟಿಗೆ ಧಾರವಾಡದಲ್ಲಿ ಟಿಕೆಟ್ ನೀಡಲಾಗಿದೆ. ಅದನ್ನು ಬದಲಾಯಿಸುವುದು ಸಾಧ್ಯವಿಲ್ಲ ಎಂಬುದು ಸಿದ್ದರಾಮಯ್ಯ ಅವರ ಅಭಿಪ್ರಾಯ. ಹೀಗಾಗಿ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆ ಯಾರಿಗೆ ಲಾಭ, ನಷ್ಟ ಎಂಬುದು ಕೆಲವೇ ದಿನಗಳಲ್ಲಿ ಸ್ಪಷ್ಟವಾಗಲಿದೆ.

# ಬಿಜೆಪಿ ಕೆಲಸ ನೋಡಿದ್ದೀರಿ, ನನಗೊಂದು ಅವಕಾಶ ಕೊಡಿ: ಮೃಣಾ ಹೆಬ್ಬಾಳಕರ್

ಬೆಳಗಾವಿ: ಕಳೆದ 20 ವರ್ಷ ಬಿಜೆಪಿಗೆ ಅಧಿಕಾರ ಕೊಟ್ಟು ನೋಡಿದ್ದೀರಿ. ಈ ಬಾರಿ ನನಗೆ ಅವಕಾಶ ಮಾಡಿಕೊಡಿ. ನಿಮ್ಮ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡಿ ತೋರಿಸುತ್ತೇನೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ಲೋಕಸಭಾ ಚುನಾವಣೆಯ ಪ್ರಚಾರಾರ್ಥ-ರ್ಥ ಮಾರ್ಕಂಡೇಯ ನಗರದಲ್ಲಿ ಶುಕ್ರವಾರ ಪ್ರಚಾರ ಕೈಗೊಂಡು ಅವರು ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರಕಾರಗಳ ಕೆಲಸಗಳು ಭಿನ್ನವಾಗಿರುತ್ತವೆ. ಕೇಂದ್ರದಿಂದ



ದೊಡ್ಡ ದೊಡ್ಡ ಯೋಜನೆಗಳನ್ನು ತರಲು ಅವಕಾಶವಿರುತ್ತದೆ. ಇದರಿಂದ ನಮ್ಮ ಪ್ರದೇಶದ ಅಭಿವೃದ್ಧಿಯಾಗುತ್ತದೆ, ಯುವಕ-ರಿಗೆ ಉದ್ಯೋಗ ಸಿಗುತ್ತದೆ. ಆದರೆ ಕಳೆದ 4 ಅವಧಿಯಲ್ಲಿ ಬೆಳಗಾವಿಯನ್ನು ಪ್ರತಿನಿಧಿಸಿದ ಸಂಸದರಿಂದ ಜನರು ನಿರೀಕ್ಷೆ ಮಾಡಿದ್ದಷ್ಟು ಕೆಲಸಗಳಾಗಿಲ್ಲ. ಯಾರದ್ದೋ ಮುಖ ನೋಡಿ ಮತ ಹಾಕುವುದಕ್ಕಿಂತ ನಮ್ಮಿಂದ ಆಯ್ಕೆಯಾದವರು ನಮಗೆ ಏನು ಮಾಡಬಲ್ಲರು ಎನ್ನುವುದನ್ನು ಯೋಚಿಸಬೇಕು ಎಂದು ಅವರು ಹೇಳಿದರು.

ನಾನು ವಿದ್ಯಾವಂತನಾಗಿದ್ದು, ಕ್ಷೇತ್ರದ ಅಭಿವೃದ್ಧಿಯ ಸ್ಪಷ್ಟ ಕಲ್ಪನೆ ಇದೆ.

ನಮ್ಮೂರಿನ ಮಕ್ಕಳ ಇಲ್ಲೇ ಉದ್ಯೋಗ ಮಾಡಿದರೆ ತಂದೆ, ತಾಯಿಗಳಿಗೂ ಆಸರೆಯಾಗುತ್ತಾರೆ. ಅಂತಹ ಅವಕಾಶ ಕಲ್ಪಿಸಲು ಉದ್ಯೋಗ ಸೃಷ್ಟಿಗೆ ಮೊದಲ ಆದ್ಯತೆ ನೀಡುತ್ತೇನೆ. ಯುವಕರು ಉದ್ಯಮಿ ಗಳಾಗಲು ಪ್ರೋತ್ಸಾಹ ಮತ್ತು ತರಬೇತಿ ಒದಗಿಸಲಾ ಗುವುದು. ಶೈಕ್ಷಣಿಕ ಅವಕಾಶಗಳನ್ನೂ ಕಲ್ಪಿಸಲಾಗುವುದು. ಹಾಗಾಗಿ ಕಾಂಗ್ರೆಸ್ ಪಕ್ಷದ ಚಿಹ್ನೆಯಾಗಿರುವ ಹಸ್ತಕ್ಕೆ ಮತ ನೀಡುವ ಮೂಲಕ ಈ ಬಾರಿ ನನಗೆ ಅವಕಾಶ ಮಾಡಿಕೊಡಿ ಎಂದು ಅವರು ವಿನಂತಿಸಿದರು.

ಗ್ರಾಮದ ಹಿರಿಯರು ತಲೆಯ ಮೇಲೆ ಕೈ ಇಟ್ಟು ಆಶೀರ್ವಾದ ಮಾಡಿದರು. ಖಂಡಿತ ನಮ್ಮೆಲ್ಲರ ಮತವನ್ನು ನಿಮಗೆ ನೀಡುತ್ತೇವೆ ಎಂದು ಭರವಸೆ ನೀಡಿದರು. ಈ ಸಮಯದಲ್ಲಿ ಸ್ಥಳೀಯ ನಿವಾಸಿಗಳು, ಹಿರಿಯರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತ-ರಿದ್ದರು.

# "ನಾವಿ ಸಮಾಜದ" ಪ್ರಚಾರ ಸಭೆ

ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿ ದಕ್ಷಿಣ ಮತಕ್ಷೇತ್ರದ ಶಾಸ್ತ್ರಿ ನಗರದ ಸಂತ ಸೇನಾ ಭವನದಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾದ ಜಗದೀಶ್ ಶೆಟ್ಟರ್ ಅವರು "ನಾವಿ ಸಮಾಜದ" ಪ್ರಚಾರ ಸಭೆ ನಡೆಸಿ, ಮತಯಾಚನೆ ಮಾಡಿದರು.

ಜಾಗತಿಕ ಮಟ್ಟದಲ್ಲಿ ಭಾರತಕ್ಕೆ ಗೌರವತಂದುಕೊಟ್ಟ ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಗಳಾಗಿ ಆಯ್ಕೆ ಮಾಡಲು ನಾವಿ ಸಮಾಜ ಬಂಧುಗಳು ಭಾರತೀಯ ಜನತಾ



ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರಾದ ಶ್ರೀ ಹನುಮಂತ ನಿರಾಣಿ, ಮಹಾನಗರ ಅಧ್ಯಕ್ಷರಾದ ಶ್ರೀಮತಿ ಗೀತಾ ಸುತಾರ, ದಕ್ಷಿಣ ಮತ ಕ್ಷೇತ್ರದ ಅಧ್ಯಕ್ಷರಾದ ಶ್ರೀ ಪ್ರಶಾಂತ ಕಂಗ್ರಾಳಕರ, ಪಾಲಿಕೆ ಸದಸ್ಯರಾದ ಶ್ರೀ ರಾಜು ಬಾತಕಾಂಡೆ, ಪ್ರಮುಖರಾದ ಶ್ರೀ ಹರಕುನಿ, ಶ್ರೀ ಆರ್. ಎಸ್. ಮುತ್ತಾಲಿಕ ಹಾಗೂ ನಾವಿ ಸಮಾಜದ ಬಂಧುಗಳು ಉಪಸ್ಥಿತರಿದ್ದರು.

# ರಾತ್ರೋರಾತ್ರಿ ಕಾರ್ಯಾಚರಣೆ: ಜೆಡಿಎಸ್‌ನ 400 ಕ್ಕೂ ಹೆಚ್ಚು ಮುಖಂಡರು ಕಾಂಗ್ರೆಸ್ ಸೇರ್ಪಡೆ

ಬೆಂಗಳೂರು: ರಾತ್ರೋರಾತ್ರಿ ಜೆಡಿಎಸ್‌ಗೆ ಕನಕಪುರದ ಬಂಡೆ ಡಿ.ಕೆ. ಶಿವಕುಮಾರ್ ಬಿಗ್ ಶಾಕ್ ಕೊಟ್ಟಿದ್ದಾರೆ.

ಚನ್ನಪಟ್ಟಣದ ಜೆಡಿಎಸ್ ನಾಯಕರಾದ ಅಕ್ಕೂರುದೊಡ್ಡಿ ಶಿವಣ್ಣ, ಮತ್ತಿತರರ ನಾಯಕರು ಸೇರಿದಂತೆ ಬರೋಬ್ಬರಿ 400 ಕ್ಕೂ ಮುಖಂಡರನ್ನ ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಚನ್ನಪಟ್ಟಣದ ಜೆಡಿಎಸ್ ನಾಯಕರಾದ ಅಕ್ಕೂರುದೊಡ್ಡಿ ಶಿವಣ್ಣ, ಮತ್ತಿತರರ ನಾಯಕರು ಹಾಗೂ ಕಾರ್ಯಕರ್ತರನ್ನು ಗುರುವಾರ ರಾತ್ರಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡ ಬಳಿಕ ಮಾತನಾಡಿದ ಶಿವಕುಮಾರ್ ಅವರು, ಕುಮಾರಸ್ವಾಮಿ ಹಾಗು ದೇವೇಗೌಡರು ತಮ್ಮ ಕುಟುಂಬದ ಸದಸ್ಯರನ್ನು ಬಿಜೆಪಿಯಿಂದ ಕಣಕ್ಕೆ ಇಳಿಸಿ, ಜೆಡಿಎಸ್ ಪಕ್ಷವನ್ನು ಹೇಗೆ ಕಟ್ಟುತ್ತಾರೆ ಎಂದು ಲೇವಡಿ ಮಾಡಿದರು.

ದೇವೇಗೌಡರು ಪಕ್ಷದ ಅಧಿಕಾರವನ್ನು



ಕುಮಾರಸ್ವಾಮಿ ಅವರಿಗೆ ಕೊಟ್ಟ ಪರಿಣಾಮ ಆ ಪಕ್ಷ ಈ ಸ್ಥಿತಿ ತಲುಪಿದೆ. ಈಗ ತಮ್ಮನ್ನು ಅಧಿಕಾರದಿಂದ ಕೆಳಗೆ ಇಳಿಸಿದವರನ್ನೇ ಕರೆದುಕೊಂಡು ಒಕ್ಕಲಿಗರ ಮತಕ್ಕೆ ಹೋಗಿದ್ದಾರೆ. ಕುಮಾರಸ್ವಾಮಿ ಅವರು ಅಧಿಕಾರದಲ್ಲಿದ್ದಾಗ ತಮ್ಮ ಪಕ್ಷದ ಕಾರ್ಯಕರ್ತ-ರಿಗೆ ಒಂದು ಸಣ್ಣ ಅಧಿಕಾರವನ್ನಾದರೂ ಕೊಟ್ಟರಾ? ಅಧಿಕಾರ ಇದ್ದಾಗಲೇ ಏನು ಮಾಡಲಿಲ್ಲ. ಕಾರ್ಯಕರ್ತರು ಇಲ್ಲದೆ ಯಾವ ಪಕ್ಷ ಇರಲು ಸಾಧ್ಯ? ಎಂದು ಪ್ರಶ್ನಿಸಿದರು.

## ಫ್ಲೈ ಓವರ್ ಮೇಲಿಂದ ಜಿಗಿದು ನೌಕರ ಆತ್ಮಹತ್ಯೆ

ಫ್ಲೈ ಓವರ್ ಮೇಲಿಂದ ಜಿಗಿದು ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ನಾಯಂಡಹಳ್ಳಿಯಲ್ಲಿ ನಡೆದಿದೆ.

ನಾಯಂಡಹಳ್ಳಿಯ ಫ್ಲೈ ಓವರ್ ಮೇಲಿಂದ ಕೆಳಗೆ ಜಿದ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. 30 ವರ್ಷದ ನವೀನ್ ಮೃತ ದುರ್ದೈವಿ.

ಜ್ಞಾನಭಾರತಿ ನಿವಾಸಿಯಾಗಿದ್ದ ಈತ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಗುತ್ತಿಗೆ ನೌಕರನಾಗಿ ಕೆಲಸ ಮಾಡುತ್ತಿದ್ದ. ಇಂದು ಬೆಳಿಗ್ಗೆ ಫ್ಲೈ ಓವರ್ ಮೇಲೆ ಬೈಕ್ ಪಾರ್ಕ್ ಮಾಡಿದ ನವೀನ್ ಏಕಾಏಕಿ ಕೆಳಗೆ ಜಿಗಿದಿದ್ದಾನೆ. ಇದನ್ನು ಕಂಡ ಬ್ಯಾಟರಾಯನಪುರ ಸಂಚಾರಿ ಠಾಣೆ ಪೊಲೀಸರು ತಕ್ಷಣ ಧಾವಿಸಿದ್ದಾರೆ. ಅಷ್ಟರಲ್ಲಿ ಆತನ ಪ್ರಾಣಪಕ್ಷಿ ಹಾರಿಹೋಗಿದೆ.

# ಕರ್ನಾಟಕದಲ್ಲಿ ಇಂದಿನಿಂದ ಮತದಾನ ಆರಂಭ: ಮನೆಗೆ ಬರಲಿದೆ ಮತಗಟ್ಟೆ

ಬೆಂಗಳೂರು: ಏ.26 ರಂದು ಮೊದಲ ಹಂತ ನಡೆಯಲಿರುವ ಲೋಕಸಭಾ ಕ್ಷೇತ್ರಗಳಲ್ಲಿ ನಾಳೆಯಿಂದ ಹಿರಿಯ ನಾಗ-ರಿಕರ ಮತದಾನ ನಡೆಯಲಿದೆ.

ರಾಜ್ಯದಲ್ಲಿರುವ 85 ವರ್ಷಕ್ಕಿಂತ ಮೇಲ್ಪಟ್ಟ (ಎವಿಎಸ್ಸಿ) ಹಾಗೂ ವಿಶೇಷ ಚೇತನರಿಗೆ (40%ಕ್ಕಿಂತ ಹೆಚ್ಚು ಅಂಗವಿಲತೆ ಉಳ್ಳ, ಮತದಾರರ ಪಟ್ಟಿಯಲ್ಲಿ ಗುರುತಿಸಿರುವವರಿಗೆ) ಅಂಚೆ ಮತದಾನದ ಮೂಲಕ ಅವಕಾಶ ಕಲ್ಪಿಸಲಾಗಿದೆ.

ಬೆಂಗಳೂರಿನಲ್ಲಿ 85 ವರ್ಷ ಮೇಲ್ಪಟ್ಟ 95,128 ಹಾಗೂ 22,222 ವಿಶೇಷ ಚೇತನರನ್ನು ಗುರುತಿಸಲಾಗಿದೆ. ಈ ಪೈಕಿ



85 ವರ್ಷ ಮೇಲ್ಪಟ್ಟ 6206 ಮತದಾರರು ಹಾಗೂ ವಿಶೇಷ ಚೇತನರು 201 ಮತದಾರರು ಅಂಚೆ ಮತದಾನ ಮಾಡಲು ನೋಂದಣಿ ಮಾಡಿಕೊಂಡಿದ್ದಾರೆ.

85 ವರ್ಷ ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದವರು ಹಾಗೂ ವಿಶೇಷ ಚೇತನ-ರಿಗೆ ಏಪ್ರಿಲ್ 13 ರಿಂದ ಏಪ್ರಿಲ್ 18 ರವರೆಗೆ ಮನೆಯಿಂದಲೇ ಗೌಪ್ಯ ಮತದಾನಕ್ಕೆ ಅವಕಾಶ ಕಲ್ಪಿಸಲಾಗುವುದು. ಮತದಾರರ ಮನೆಗೆ ಇಬ್ಬರು ಮತಗಟ್ಟೆ ಅಧಿಕಾರಿಗಳು, ಭದ್ರತಾ ಸಿಬ್ಬಂದಿ, ವಿಡಿಯೋಗ್ರಾಫರ್ ಒಳಗೊಂಡಿರುವ ಮತಗಟ್ಟೆ ತಂಡವು ಮನೆಗೆ ತೆರಳಿ ಮತದಾನ ಗುರುತಿನ ಚೀಟಿ ಪರಿಶೀಲಿಸಲಾಗುತ್ತದೆ. ಬಳಿಕ ಗೌಪ್ಯ ಮತದಾನಕ್ಕಾಗಿ ಅಂಚೆ ಮತಪತ್ರದಲ್ಲಿ ಮತ ಚಲಾಯಿಸಲು ಅವಕಾಶ ಕಲ್ಪಿಸುತ್ತದೆ. ಈ ಎಲ್ಲಾ ಪ್ರಕ್ರಿಯೆಯನ್ನು ವಿಡಿಯೋ ಮೂಲಕ ಸೆರೆಹಿಡಿಯಲಾಗುತ್ತದೆ.

ಮತಗಟ್ಟೆ ಸಿಬ್ಬಂದಿಯು ಮತಪತ್ರ ಹಾಗೂ ಮತಪೆಟ್ಟಿಗೆಗಳೊಂದಿಗೆ ಪ್ರತೀ ಮತದಾರರ ಮನೆಗೆ ಎರಡು ಬಾರಿ ಭೇಟಿ ನೀಡುತ್ತಾರೆ. ಮುಂಚಿತವಾಗಿ ಮಾಹಿತಿ ನೀಡಿದ ಬಳಿಕವೇ ಮತಗಟ್ಟೆ ಸಿಬ್ಬಂದಿ ಭೇಟಿ ನೀಡುತ್ತಾರೆ. ಮೊದಲ ಬಾರಿ ಮತದಾರರು ಮನೆಯಲ್ಲಿರದಿದ್ದರೆ, ಎರಡನೇ ಬಾರಿ ಹೋಗುತ್ತಾರೆ. ಈ ವೇಳೆ ಮತದಾರರು ಸಿಗದಿದ್ದರೆ, ಬಳಿಕ ಮತದಾನಕ್ಕೆ ಅವಕಾಶವಿರುವುದಿಲ್ಲ. ಮನೆಯಿಂದ ಮತದಾನಕ್ಕೆ 12ಡಿ ನಮೂನೆಯಲ್ಲಿ ನೋಂದಣಿ ಮಾಡಿಸಿಕೊಂಡಿರುವವ-ರಿಗೆ ಮತಗಟ್ಟೆಗೆ ಬಂದು ವಿದ್ಯುನ್ಮಾನ ಮತಯಂತ್ರದಲ್ಲಿ ಮತ ಚಲಾಯಿಸುವ ಅವಕಾಶವಿರುವುದಿಲ್ಲ.

# ಜೀಪ್- ಬಸ್ ನಡುವೆ ಅಪಘಾತ: ಕರ್ನಾಟಕದ ಮೂವರು ಪೊಲೀಸರು ಸಾವು

ತಮಿಳುನಾಡು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಭದ್ರತೆಗೆ ನಿಯೋಜನೆಗೊಂಡಿದ್ದ ಐವರು ಪೊಲೀಸ್ ಅಧಿಕಾರಿಗಳು ಹೋಗುತ್ತಿದ್ದ ಜೀಪ್ ಮತ್ತು ಬಸ್ ನಡುವೆ ಭೀಕರ ಅಪಘಾತ ಸಂಭವಿಸಿ ಕರ್ನಾಟಕದ ಓರ್ವ ಪೊಲೀಸ್ ಅಧಿಕಾರಿ ಹಾಗೂ ಕಾನ್ಸ್ಟೇಬಲ್ ಸೇರಿ ಮೂವರು ಮೃತಪಟ್ಟಿರುವ ಘಟನೆ ರುವಣ್ಣಾಮಲೈ-ದಿಂಡಿವನಂ ಹೈವೇಯಲ್ಲಿ ನಡೆದಿದೆ.

ಈ ಘಟನೆಯಲ್ಲಿ ಕರ್ನಾಟಕದ ಓರ್ವ ಅಧಿಕಾರಿ ಹಾಗೂ ಕಾನ್ಸ್ಟೇಬಲ್ ಸೇರಿ ಮೂವರು ಮೃತಪಟ್ಟಿದ್ದರೆ ಉಳಿದ ಇಬ್ಬರ ಸ್ಥಿತಿ ಗಂಭೀರವಾಗಿದೆ. ಕರ್ನಾಟಕದಿಂದ ಎಲೆಕ್ಷನ್ ಡ್ಯೂಟಿಗೆ ಹೋಗಿದ್ದ ಪೊಲೀಸ್ ಅಧಿಕಾರಿ, ಏಖಖಏ ಅಸಿಸ್ಟೆಂಟ್ ಕಮಾಂಡೆಂಟ್ ಪ್ರಭಾಕರ್, ಕಾನ್ಸ್ಟೇಬಲ್



ವಿಠಲ್ ಹಾಗೂ ತಮಿಳುನಾಡು ಕಾನ್ಸ್‌ಟೇಬಲ್ ದಿನೇಶ್ ಮೃತಪಟ್ಟಿದ್ದಾರೆ.

ಸಂಜೆ 4 ಗಂಟೆ ಸುಮಾರಿಗೆ ತಿರುವಣ್ಣಾಮಲೈ-ದಿಂಡಿವನಂ ಹೈವೇಯಲ್ಲಿ ಅಪಘಾತ ಸಂಭವಿಸಿದ್ದು, ತೀವ್ರವಾಗಿ ಗಾಯಗೊಂಡಿದ್ದ ಇಬ್ಬರು ಆಸ್ಪತ್ರೆಗೆ ತೆರಳುವಷ್ಟರಲ್ಲಿ ಕೊನೆಯುಸಿರೆಳೆದಿದ್ದಾರೆ. ಸದ್ಯ ಮೂವರ ಮೃತದೇಹಗಳನ್ನು ತಮಿಳುನಾಡಿನ ಆಸ್ಪತ್ರೆಗೆ ರವಾನೆ ಮಾಡಲಾಗಿದ್ದು ಮರಣೋತ್ತರ ಪರೀಕ್ಷೆ ಬಳಿಕ ಕರ್ನಾಟಕ ಪೊಲೀಸರಿಗೆ ಹಸ್ತಾಂತರ ಮಾಡಲಾಗುತ್ತದೆ. ಇನ್ನು ಅಪಘಾತದ ರಭಸಕ್ಕೆ ಜೀಪ್ ಛಿದ್ರವಾಗಿದ್ದು, ಬಸ್‌ನ ಮುಂಭಾಗ ಸಹ ಜಖಂ ಆಗಿದೆ. ಸದ್ಯ ಗಂಭೀರವಾಗಿ ಗಾಯಗೊಂಡಿರುವ ಏಖಖಏ ಡಪ್ಯೂಟಿ ಕಮಾಂಡೆಂಟ್ ಹೇಮಂತ್ ಕುಮಾರ್, ಜಯಕುಮಾರ್ ಅವರನ್ನು ತಿರುವಣ್ಣಾಮಲೈ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

# ಪ್ರಧಾನಿ ಮೋದಿ ಮೊದಲಿನ ಗ್ಯಾರಂಟಿಗಳೇ ಕೊಟ್ಟಿಲ್ಲ, ಈಗೇನು ಕೊಡುತ್ತಾರೆ: ಮಲ್ಲಿಕಾರ್ಜುನ ಖರ್ಗೆ ಟೀಕೆ

ಕಲಬುರಗಿ: ವರ್ಷಕ್ಕೆ ಎರಡು ಕೋಟಿ ಉದ್ಯೋಗ, ರೈತರ ಆದಾಯ ದುಪ್ಪಟ್ಟು, ಎಂಎಸ್ಪಿ ಬೆಲೆ ಹೆಚ್ಚಳದಂತಹ ಗ್ಯಾರಂಟಿಗಳನ್ನೇ ಮಾಡದಿರುವ ಪ್ರಧಾನಿ ನರೇಂದ್ರ ಮೋದಿ ಈಗೇನು ಗ್ಯಾರಂಟಿ ಕೊಡ್ತಾರೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಟೀಕಿಸಿದರು.

ಕಲಬುರಗಿ ಲೋಕಸಭಾ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಪರವಾಗಿ ಆಯೋಜಿಸಲಾಗಿದ್ದ ಕಾಂಗ್ರೆಸ್ ಪಕ್ಷದ ಸಮಾವೇಶ ಉದ್ಘಾಟಿಸಿ ಮಾತನಾಡಿದರು. ಕಾಂಗ್ರೆಸ್ ಪಕ್ಷ ಗ್ಯಾರಂಟಿಗಳನ್ನು ಘೋಷಣೆ ಮಾಡಿ ಅವುಗಳನ್ನು ಈಗಾಗಲೇ ರಾಜ್ಯದಲ್ಲಿ ಕಾರ್ಯಾನುಷ್ಠಾನ ತರಲಾಗಿದೆ. ಆದರೆ ಮೋದಿ ಗ್ಯಾರಂಟಿ ಬರೀ ಜಾಹೀರಾತುಗಳಲ್ಲಿ ಮಾತ್ರ ಎಂದು ವಾಗ್ದಾಳಿ ನಡೆಸಿದರು.

ಎಐಸಿಸಿ ಗ್ಯಾರಂಟಿ ಗಳನ್ನು ನೋಡಿ ಹಾಗೂ ಇಂಡಿಯಾ ಒಕ್ಕೂಟ ವ್ಯಾಪಕವಾಗಿ ಬಲವರ್ಧನೆಗೊಳ್ಳುತ್ತಿರುವುದನ್ನು ಕಂಡು ಪ್ರಧಾನಿ ನರೇಂದ್ರ ಮೋದಿ ದೇಶದ ಗಲ್ಲಿ-ಗಲ್ಲಿ ರೋಡ ಶೋ ನಡೆಸಿ ಇಲ್ಲದ ಗ್ಯಾರಂಟಿ ಪ್ರಸ್ತಾಪಿಸುತ್ತಿದ್ದಾರೆ.

ಅದರಲ್ಲೂ ಇಡಿ, ಐಟಿ,ಸಿಬಿಐ ಬಳಸಿ ಹಲವರನ್ನು ತಮ್ಮತ್ತ ಸೆಳೆಯುತ್ತಿದ್ದಾರೆ. ಇದು ಸಂವಿಧಾನದ ಆಶಯ ವಿರುದ್ಧವಾಗಿದೆ.ಹೀಗಾಗಿ ದೇಶದ ಜನ ಈಗಲಾದರೂ ಎಚ್ಚೆತ್ತುಕೊಳ್ಳಬೇಕೆಂದರು.

ದೇಶದ ಹಲವು ಸಂಸ್ಥೆಗಳಲ್ಲಿ ಆರ್ ಎಸ್ ಎಸ್ ಸ್ವಯಂ ಸೇವಕರು ಹಾಗೂ ಶಿಕ್ಷಕರನ್ನು ಸೇರಿಸಿ ಇಡೀ ಆಡಳಿತ ವ್ಯವಸ್ಥೆ ಬುಡಮೇಲು ಮಾಡಲಾಗುತ್ತಿದೆ. ಜನ ಈಗಲಾದರೂ ಎಚ್ಚೆತ್ತುಕೊಳ್ಳಬೇಕೆಂದರು.

**ಸವಾಲು ಹಾಕಿದ ಖರ್ಗೆ:** ಕಳೆದ ಹತ್ತು ವರ್ಷದಲ್ಲಿ ಪ್ರಧಾನಿ ಮೋದಿ ಏನು ಅಭಿವೃದ್ಧಿ ಮಾಡಿದ್ದಾರೆ ಎಂಬುದನ್ನು ಜನತೆಯ ಮುಂದಿಡಲಿ ಎಂದು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಸವಾಲು ಹಾಕಿದರು.

ಕಳೆದ ತಿಂಗಳು ಪ್ರಧಾನಿ ಮೋದಿ ಇಲ್ಲಿಗೆ ಬಂದು ಹೋಗಿದ್ದಾರೆ ತಮ್ಮ ಹತ್ತು ವರ್ಷಗಳ ಅವಧಿಯಲ್ಲಿ ಈ ಭಾಗಕ್ಕೆ ಏನು ಕೊಟ್ಟಿದ್ದಾರೆ ಎಂಬುದನ್ನು ಹೇಳಬೇಕಿತ್ತು ಎಂದರು. ಕಲಬುರಗಿಯಲ್ಲಿ ಇಎಸ್ ಐ ಆಸ್ಪತ್ರೆ ಕಟ್ಟಿದ್ದೇವೆ. ಅಲ್ಲಿ ಏಮ್ಸ್ ನಿರ್ಮಾಣ ಮಾಡಲು ಮೋದಿ ಅವರಿಗೆ ಮನವಿ ಮಾಡಿದ್ದೆ. ಆದ-ರೆ ನನ್ನ ಮೇಲೆ ಏನು ಸಿಟ್ಟು ಗೊತ್ತಿಲ್ಲ ನಮ್ಮ ಮನವಿಯನ್ನು ಪುರಸ್ಕರಿಸಲಿಲ್ಲ. ನನ್ನ ಅವಧಿಯಲ್ಲಿ ಮಂಜೂರಾಗಿದ್ದ ರೇಲ್ವೆ ವಿಭಾಗ ಕಚೇರಿ ಯೋಜನೆ ವಾಪಸ್ ಹೋಗಿದೆ. ನಾನು ನನ್ನ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳಲ್ಲಿ ಶೇ 10 ರಷ್ಟು ಅಭಿವೃದ್ಧಿ ಮಾಡಿದ್ದರೆ ತೋರಿಸಲಿ ಆಗ ನಾನು ಶಹಬ್ಬಾಶ್ ಎನ್ನುತ್ತೇನೆ ಎಂದು ಸವಾಲು ಹಾಕಿದರು.

ಮೋದಿ ತಮ್ಮ ಗ್ಯಾರಂಟಿ ಏನು ಎಂದು ಮೊದಲು ಜನರಿಗೆ ತಿಳಿಸಲಿ ಎಂದು ಆಗ್ರಹಿಸಿದ ಖರ್ಗೆ ನಾವು ರಾಜ್ಯದಲ್ಲಿ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳ ರೀತಿಯಲ್ಲೇ ತಮ್ಮ ಗ್ಯಾರಂಟಿ ಎಂದು ಜನರೇ ಹೇಳುತ್ತಿದ್ದಾತೆ. ತಮ್ಮ



ಅವಧಿಯಲ್ಲಿ ಕೈಗೊಂಡ ಅಭಿವೃದ್ಧಿ ಕೆಲಸಗಳ ಪಟ್ಟಿ ನೀಡಿದ ಖರ್ಗೆ, ರಾಷ್ಟ್ರೀಯ ಹೆದ್ದಾರಿ, ಕೇಂದ್ರಿಯ ವಿಶ್ವವಿದ್ಯಾಲಯ ಸ್ಥಾಪಿಸಿದ್ದೇನೆ. ಮೂವತ್ತೇಳು ಹೊಸ ರೈಲು ಓಡಿಸಿದ್ದೇನೆ. ಜವಳಿ ಪಾರ್ಕ್ ಮಂಜೂರು ಮಾಡಿಸಿದ್ದೇನೆ.

ಇವುಗಳನ್ನು ನೀವು ಮಾಡಿ ಎಂದು ನನಗೆ ಯಾರೂ ಹೇಳಿರಲಿಲ್ಲ. ಆದರೆ ನಮ್ಮ ಭಾಗದ ಅಭಿವೃದ್ದಿಗಾಗಿ ಕೆಲಸ ಮಾಡಿದ್ದೇನೆ ಈಗ ಓಟು ಕೇಳುತ್ತಿದ್ದೇನೆ. ಅಭಿವೃದ್ಧಿ ಆಗಬೇಕೆಂದರೆ ಕಾಂಗ್ರೆಸ್ ಗೆ ಮತ ನೀಡಿ, ಕಳೆದ ಸಲದ ಸೋಲಿನ ಸೇಡು ತೀರಿಸಿಕೊಳ್ಳಿ ಎಂದು ಮನವಿ ಮಾಡಿದರು.

ಬಿಜೆಪಿ ಬಳಿ ವಾಷಿಂಗ್ ಮಷಿನ್ ಇದೆ. ಯಾರನ್ನೂ ಭ್ರಷ್ಟಾಚಾರಿಗಳು ಎಂದು ಹೇಳಿ ಜೈಲಿಗೆ ಹಾಕುತ್ತಾರೋ ಅಂತವರನ್ನೇ ಆ ಮಷಿನ್ ಮೂಲಕ ಪಕ್ಷಕ್ಕೆ ಸೇರಿಸಿಕೊಂಡು ಅವರನ್ನು ಒಳ್ಳೆಯವರು ಎಂದು ಬಿಂಬಿಸುತ್ತಾರೆ ಎಂದು ವ್ಯಂಗ್ಯವಾಡಿದ ಖರ್ಗೆ, ಭ್ರಷ್ಟಾಚಾ-ರಿಗಳನ್ನು ಬಿಡುವುದಿಲ್ಲವೆಂದು ಮೋದಿ ಹಾಗೂ ಶಾ ಹೇಳುತ್ತಾರೆ. ಬಿಡುವ ಮಾತಿ-ರಲಿ ನಿಮ್ಮ ಪಕ್ಕದಲ್ಲೇ ಕೂಡಿಸಿಕೊಂಡಿದ್ದೀರಲ್ಲ ಎಂದು ಟಾಂಗ್ ನೀಡಿದರು.

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಯಾವುದೇ ಕಂಪನಿಯಲ್ಲಿ ಯುವಕ ಯುವತಿಯರು ಅಂಪ್ರೆಟಿಸಿಪ್ ಮಾಡಿ ಬಂದರೆ ಅವರಿಗೆ ಉದ್ಯೋಗ ನೀಡಲಾಗುವುದು. ರೈತರ ಸಾಲ ಮನ್ನಾ ಮಾಡಲಾಗುವುದು. ಮಹಿಳೆಯರಿಗೆ ಪ್ರತಿ ವರ್ಷ ಒಂದು ಲಕ್ಷ ನೀಡಲಾಗುವುದು. ಒಟ್ಟಾರೆ 25 ಗ್ಯಾರಂಟಿಗಳನ್ನು ಜಾರಿಗೆ ತರಲಾಗುವುದು ಎಂದರು.

ರಾಧಾಕೃಷ್ಣ ಅವರಿಗೆ ಓಟು ಕೊಟ್ಟು ಗೆಲ್ಲಿಸಿ ಮುಂದಿನ ಐದು ವರ್ಷದಲ್ಲಿ ಏನು ಬದಲಾವಣೆ ಮಾಡುತ್ತೇನೆ ನೋಡಿ. ಈ ಭಾಗವನ್ನು ನಿಜವಾದ ಕಲ್ಯಾಣ ಕರ್ನಾಟಕವನ್ನಾಗಿ ಮಾಡಿ ತೋರಿಸುತ್ತೇನೆ ಎಂದು ವಾಗ್ದಾನ ಮಾಡಿದರು.

ಈ ಚುನಾವಣೆ ಕೇವಲ ರಾಧಾಕೃಷ್ಣ ಅಥ-ವಾ ಕಾಂಗ್ರೆಸ್ ಚುನಾವಣೆಯಲ್ಲ ಬದಲಿಗೆ ದೇಶದ ಸಂವಿಧಾನ ಪ್ರಜಾಸತ್ತೆ ಉಳಿಸುವ ಚುನಾವಣೆಯಾಗಲಿದೆ. ಪ್ರಜಾತಂತ್ರ ಉಳಿಯಬೇಕು ಹಾಗೂ ಈಭಾಗ ಬೆಳೆಯಬೇಕು ಎನ್ನುವ ಇಚ್ಛೆ ಇದ್ದರೆ ಕಾಂಗ್ರೆಸ್ ಗೆ ಮತ ನೀಡಿ ಎಂದು ಮನವಿ ಮಾಡಿ ನಿಮ್ಮ ದರ್ಶನಕ್ಕಾಗಿ ನಾನು ಇಲ್ಲಿಗೆ ಬಂದಿದ್ದೇನೆ ಎಂದರು.

ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಮಾತನಾಡಿ ಮೋದಿ ಅವರು ಇಲ್ಲಿ ಬಂದು ದ್ವೇಷದ ಪ್ರಚಾರ ಪ್ರಾರಂಭಿಸಿದ್ದಾರೆ. ಆದರೆ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಇದೂವರೆಗೆ ಕೈಗೊಂಡ ಅಭಿವೃದ್ಧಿ ಕಾರ್ಯಗಳ ಅದರಲ್ಲೂ ಆರ್ಟಿಕಲ್ 371 ಜೆ ಜಾರಿಗೆ ತಂದಿರುವುದಕ್ಕೆ ಪ್ರತಿಯಾಗಿ ನೀವೆಲ್ಲ ರಾಧಾಕೃಷ್ಣ ಅವರನ್ನು ಗೆಲ್ಲಿಸುವ ಮೂಲಕ ಮೋದಿ ಅವರಿಗೆ ಉತ್ತರ ನೀಡಬೇಕು ಎಂದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ 135 ಸ್ಥಾನಗೆಲ್ಲಿಸಿಕೊಟ್ಟಂತೆ ಈ ಸಲದ ಲೋಕಸಭೆ ಚುನಾವಣೆಯಲ್ಲಿ 25 ಕ್ಕೂ ಅಧಿಕ ಸ್ಥಾನ ಗೆಲ್ಲಿಸಬೇಕು ಇದು ಎಲ್ಲರ ಆಸೆಯಾಗಿದೆ. ನೀವು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ರಾಧಾಕೃಷ್ಣ ಅವರನ್ನು ಗೆಲ್ಲಿಸುವ ಮೂಲಕ ಖರ್ಗೆ ಅವರ ಕೈ ಬಲಪಡಿಸಿ ಎಂದು ಡಿಕೆಶಿ ಮನವಿ ಮಾಡಿದರು.

ಮಾಜಿ ಡಿಸಿಎಂ ಲಕ್ಷ್ಮಣ್ ಸವದಿ ಮಾತನಾಡಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ಅವರು ಸೌಮ್ಯ ಸ್ವಭಾವದವರು. ಅವರು ನಿಮ್ಮ ಸೇವೆ ಈಗ ಸಜ್ಜಾಗಿದ್ದಾರೆ. ಅವರನ್ನು ಕನಿಷ್ಠ 5 ಲಕ್ಷ ಮತಗಳ ಅಂತರದಿಂದ ಗೆಲ್ಲಿಸಿ ಎಂದು ಮನವಿ ಮಾಡಿದರು.

ವೇದಿಕೆಯ ಮೇಲೆ ಎಐಸಿಸಿ ಕಾರ್ಯದರ್ಶಿ ರಂದೀಪ್ ಸುರ್ಜೆವಾಲಾ, ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್, ಸಚಿವರಾದ ಶರಣಪ್ರಕಾಶ ಪಾಟೀಲ್, ಪ್ರಿಯಾಂಕ್ ಖರ್ಗೆ, ಶರಣಬಸಪ್ಪ ದರ್ಶನಾಪುರ, ಮಾಜಿ ಡಿಸಿಎಂ ಲಕ್ಷ್ಮಣ್ ಸವದಿ, ಸಿಎಂ ಸಲಹೆಗಾರರಾದ ಬಿ.ಆರ್.ಪಾಟೀಲ, ಕೆಕೆಆರ್ ಡಿ ಬಿ ಅಧ್ಯಕ್ಷ ಅಜಯ್ ಸಿಂಗ್, ಶಾಸಕರಾದ ಎಂವೈ ಪಾಟೀಲ, ಅಲ್ಲಮಪ್ರಭು ಪಾಟೀಲ, ಕನೀಜ್ ಫಾತಿಮಾ, ಯುಬಿ ವೆಂಕಟೇಶ, ಚೆನ್ನಾರೆಡ್ಡಿ ಪಾಟೀಲ ತುನ್ನೂರು, ಬಸನಗೌಡ ತುರ್ವಿಹಾಳ, ತಿಪ್ಪಣ್ಣಪ್ಪ ಕಮಕನೂರು,ಮಾಜಿ ಸಚಿವರಾದ ರಾಜಶೇಖರ್ ಪಾಟೀಲ ಹುಮನಾಬಾದ್, ಎಚ್ ಎಂ ರೇವಣ್ಣ, ಬಾಬುರಾವ ಚಿಂಚನಸೂರು, ಮಾಜಿ ಲೋಕಸಭಾ ಸದಸ್ಯರಾದ ವಿ.ಎಸ್ ಉಗ್ರಪ್ಪ, ವಿ.ವಸಂತಕುಮಾರ, ಡಿಸಿಸಿ ಅಧ್ಯಕ್ಷ ಜಗದೇವ ಗುತ್ತೇದಾರ, ಬಸರೆಡ್ಡಿ ಪಾಟೀಲ ಅನಪೂರ, ಭಾಗನಗೌಡ ಸಂಕನೂರು, ಶ್ರೇಣಿಕ ಕುಮಾರ ಧೋಕಾ, ಶಿವಾನಂದ ಪಾಟೀಲ, ಡೇವಿಡ್ ಸಿಮೆಯೋನ, ಶರಣುಮೋದಿ, ಮಹಜರ್ ಖಾನ್, ಕಿರಣ್ ದೇಶಮುಖ, ಪ್ರವೀಣ ಹರವಾಳ, ರಾಜೀವ್ ಜಾನೆ, ಭೀಮಣ್ಣ ಸಾಲಿ, ನಾಗರೆಡ್ಡಿ ಪಾಟೀಲ ಕರದಾಳ, ನೀಲಕಂಠ ಮೂಲಗೆ, ಡಿ.ಜಿ.ಸಾಗರ, ಭೀಮಣ್ಣ ಸಾಲಿ ಸೇರಿದಂತೆ ಹಲವರಿದ್ದರು.

# ಬಡವರ ಪರ ಕೆಲಸ ಮಾಡುವ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಕರೆ

ಬೆಳಗಾವಿ: ಬಡವರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ನನ್ನನ್ನು ಗೆಲ್ಲಿಸಿ ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಸದಲಗಾ ಮತಕ್ಷೇತ್ರದ ಖಡಕಲಾಟ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾದ ಪ್ರಿಯಾಂಕಾ ಜಾರಕಿಹೊಳಿ ಪರ ಚುನಾವಣಾ ಪ್ರಚಾರ ರ್ಥ್ ಪ್ರಕಾಶ ಹುಕ್ಕೇರಿ ಅವರ ನೇತೃತ್ವದಲ್ಲಿ ಖಡಕಲಾಟ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿ, ನಮ್ಮ ತಂದೆ ಸತೀಶ ಜಾರಕಿಹೊಳಿ ಹಾಗೂ ನಾಯಕರಾದ ಪ್ರಕಾಶ ಹುಕ್ಕೇರಿ ಅವರ ಮಾರ್ಗದರ್ಶನದಲ್ಲಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ಮಾಡುವೆ. ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕಕ್ಕೆ ಬಂದಲ್ಲಿ ಗ್ಯಾರಂಟಿ ಯೋಜನೆಗಳು ಇಮ್ಮಡಿಯಾಗಲಿವೆ ಕಾರಣ ಜನಪರ ಆಡಳಿತಕ್ಕಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ನನ್ನನ್ನು ಗೆಲ್ಲಿಸಿ ಎಂದು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದಕ್ಕಿಂತ ಮುಂಚೆ ರೈತರಿಗೆ ಭರವಸೆಯನ್ನು ನೀಡಿದ್ದರು. ರೈತರ ಆದಾಯ ಹೆಚ್ಚು ಆಗಿಲ್ಲ. ಕೊಟ್ಟ ಮಾತನ್ನು ಉಳಿಸಿಕೊಂಡಿಲ್ಲ ಬಿಜೆಪಿ ರೈತರು ಪ್ರತಿಭಟನೆ ಮಾಡುತ್ತಿದ್ದಾರೆ. ಯುವಕ-ರಿಗೆ ಉದ್ಯೋಗ ಸೃಷ್ಟಿ ಮಾಡುತ್ತೇವೆ ಎಂದು ಹೇಳಿದ್ದರು. ಆದರೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ಕೊಟ್ಟ ಭರವಸೆಗಳನ್ನು ಈಡೇ-ರಿಸಿಲ್ಲ. ನಮ್ಮ ಸರ್ಕಾರ ರೈತರ ಹಾಗೂ ಬಡ ಜನರ ಪರ ಇದ್ದು ಅವರ ಕಷ್ಟಗಳಿಗೆ ಸ್ಪಂದಿಸಿ ವಿವಿಧ ಯೋಜನೆಗಳನ್ನು ಜಾರಿ ಮಾಡಿ ನುಡಿದಂತೆ ನಡೆದ ಪಕ್ಷ ಎಂದು ತೋರಿಸಿದೆ ಎಂದು ಹೇಳಿದರು.

ಕಳೆದ 15 ವರ್ಷದಿಂದ ರಾಜ-ಕೀಯದಲ್ಲಿ ಸಕ್ರಿಯರಾಗಿರುವ ತಂದೆ ಸತೀಶ ಜಾರಕಿಹೊಳಿ ಅವರು ತಮ್ಮ ಮತಕ್ಷೇತ್ರದ ಗ್ರಾಮಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಶಾಲಾ ಕಾಲೇಜುಗಳನ್ನು ನಿರ್ಮಿಸಿ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿದ್ದಾರೆ.

ನನಗೂ ಇದೇ ರೀತಿಯಲ್ಲಿ ಜನರ ಸೇವೆ ಮಾಡುವ ಬಯಕೆಯಿದೆ. ಕಾಂಗ್ರೆಸ್ ಪಕ್ಷ ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದೆ. ಹೀಗಾಗಿ ಈ ಬಾರಿ ಕಾರ್ಯಕರ್ತರು ಕಾಂಗ್ರೆಸ್ ಪಂಚ ಗ್ಯಾರಂಟಿಗಳನ್ನು ಮನೆ ಮನೆಗೆ ತಿಳಿಸಿ ಈ ಚುನಾವಣೆಯಲ್ಲಿ ನನಗೆ ಹೆಚ್ಚು ಮತ ನೀಡುವಂತೆ ಮಾಡಬೇಕು. ಈ ಚುನಾವಣೆಯಲ್ಲಿ ನಾನು ಗೆದ್ದರೆ ರಾಜ್ಯದಲ್ಲಿ ಸಿಎಂ, ಜಿಲ್ಲಾ



ಮಂತ್ರಿಯಾಗಿ ನಮ್ಮ ತಂದೆಯವರು ಹಾಗೂ ಚಿಕ್ಕೋಡಿ ಕ್ಷೇತ್ರದಲ್ಲಿ ಪ್ರಕಾಶ ಹುಕ್ಕೇರಿ-ಗಣೇಶ ಹುಕ್ಕೇರಿ ಸೇರಿದಂತೆ ನಾನು ಸೇರಿ 5 ಇಂಜನ್ ಶಕ್ತಿಯಷ್ಟು ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಬರಲಿದೆ. ಆದ್ದರಿಂದ ಕಾರ್ಯಕರ್ತರು ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಡಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಪಕ್ಷ 2013ರಲ್ಲಿ ಅಧಿಕಾರಕ್ಕೆ ಬರುವುದಕ್ಕಿಂತ ಮುಂಚೆ ಪ್ರಣಾಳಿಕೆಯಲ್ಲಿ 165 ಭರವಸೆಗಳನ್ನು ನೀಡಿತು 158 ಭರವಸೆಗಳನ್ನು ಈಡೇರಿಸಿದೆ. ಅನ್ನಭಾಗ್ಯ, ಕ್ಷೀರಭಾಗ್ಯ, ಶೂ ಭಾಗ್ಯ, ರೈತರ ಸಾಲ ಮನ್ನಾ, ಇಂದಿರಾ ಕ್ಯಾಂಟೀನ್ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಈಡೇರಿಸಿದೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿಧ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ.ಹೀಗಾಗಿ ಈ ಬಾರಿ ಕ್ಷೇತ್ರದ ಅಭಿವೃದ್ಧಿಗೆ ಕಾಂಗ್ರೆಸ ಗೆ ಮತ ನೀಡುವಂತೆ ಮನೆ ಮನೆಗೆ ತೆರಳಿ ಕಾರ್ಯಕರ್ತರು ಕೈ ಸಾಧನೆ ತಿಳಿಹೇಳಬೇಕು ಎಂದರು.

ಈ ವೇಳೆ ಎಂಎಲ್ ಸಿ ಪ್ರಕಾಶ ಹುಕ್ಕೇರಿ ಮಾತನಾಡಿ, ನಾನೂ ಕೂಡಾ ಈ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಹೀಗಾಗಿ ಮತದಾರರು ತಪ್ಪು ಹೆಜ್ಜೆ ಇಡುವ ಮೊದಲು ಕಾಂಗ್ರೆಸ್ ಪಕ್ಷ ಮಾಡಿರುವ ಸಾಧನೆಗಳ ಕುರಿತು ಒಮ್ಮೆ ಅವಲೋಕನ ಮಾಡಿ ನಮ್ಮ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಕಾರ್ಯಕರ್ತರು ಮುಂದಾಗಬೇಕು. ನಮ್ಮ ಕ್ಷೇತ್ರದ ಮತದಾರರಿಂದ ಮಾತ್ರ ಪ್ರಕಾಶ ಹುಕ್ಕೇರಿ- ಗಣೇಶ ಹುಕ್ಕೇರಿ ಈ ಮಟ್ಟಕ್ಕೆ ಬರಲು ಸಾಧ್ಯವಾಗಿದೆ ಹೊರತು ನಮ್ಮಿಂದಲೇ ಈ ಮಟ್ಟಕ್ಕೆ ಬರಲು ಸಾಧ್ಯವಿಲ್ಲ ಎಂದ ಅವರು. 38 ವರ್ಷ ನಿರಂತರ ಪ್ರಾಮಾಣಿಕವಾಗಿ ನಿಮ್ಮ ಸೇವೆ ಮಾಡಿದ್ದರಿಂದ ನೀವು ನಿರಂತರ ನಮ್ಮನ್ನೇ ಆಯ್ಕೆ ಮಾಡುವ ಮೂಲಕನಿಮ್ಮ ಪ್ರಾಮಾಣಿಕ ದೊಡ್ಡ ಗುಣವನ್ನು ನಮಗೆ ತೋ-ರಿಸಿದ್ದಿರಿ. ಇನ್ನೊಮ್ಮೆ ಈ ಕ್ಷೇತ್ರದ ಅಭಿವೃದ್ಧಿಗೆ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವ-ರಿಗೆ ಹೆಚ್ಚು ಮರತ ನೀಡಲು ಮುಂದಾಗಬೇಕು ಎಂದರು.

ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಕೇವಲ ನಮ್ಮ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ಪುತ್ರಿ ಅಲ್ಲ. ನಮ್ಮ ಚಿಕ್ಕೋಡಿ ಸದಲಗಾ ಮತಕ್ಷೇತ್ರದ ಮನೆ ಮಗಳು. ಹೀಗಾಗಿ ಸತೀಶ ಜಾರಕಿಹೊಳಿ ಅವರ ಆಶಯದಂತೆ, ಪಕ್ಷದ ಗೆಲುವಿಗಾಗಿ ವಿಧಾನಸಭೆ ಚುನಾವಣಾ ಮಾದರಿಯಲ್ಲಿ ಶಾಸಕರಾದ ಗಣೇಶ ಹುಕ್ಕೇರಿ ಅವರ ನೇತೃತ್ವದಲ್ಲಿ ಪ್ರತಿ ಮನೆ ಮನೆಗೆ ತೆರಳಿ ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ತಿಳಿಸಿ ಹೆಚ್ಚಿನ ಅಂತರದಿಂದ ನಮ್ಮ ಅಭ್ಯರ್ಥಿಯನ್ನು ಗೆಲ್ಲಿಸಲು ಕಾರ್ಯಕರ್ತರು ಮುಂದಾಗಬೇಕು ಎಂದು ಕರೆ ನೀಡಿದರು.

ಈ ಸಭೆಯಲ್ಲಿ ಮಾಜಿ ಶಾಸಕರಾದ ಕಾಕಾಸಾಬ ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಲಕ್ಷ್ಮಣರಾವ್ ಚಿಂಗಳೆ, ಜಿಲ್ಲಾ ಪಂಚಾಯತ್ ಸದಸ್ಯರಾದ ಸತೀಶ ಪಾಟೀಲ, ವಿನೋದ ಕಾಗೆ, ನಾಸಿರ ತಹಸೀಲ್ದಾರ, ರಾಕೇಶ ಚಿಂಚಣೆ, ಮಾಣಿಕ ಪಾಟೀಲ, ಭೀಮಾ ಉಡ-'ಗಟ್ಟಿ, ಭೀಮಾ ಖಂಚನಾಳೆ, ಜಿತೇಂದ್ರ ಪಾಟೀಲ, ಪ್ರಮೋದ ಪಾಟೀಲ, ರೋಹಿತ ಯಾದವ ಹಾಗೂ ನವಲಿಹಾಳ, ಖಡಕಲಾಟ, ಚಿಂಚಣಿ, ಕೋಥಳಿ, ಚಿಕ್ಕಲವಾಳ ಹಾಗೂ ಶಿರಗಾಂವ ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಸೇರಿದಂತೆ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಗೋಕಾಕ್, ಅರಭಾವಿ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮುನ್ನಡೆ ಖಚಿತ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ : ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಗೋಕಾಕ್ ಹಾಗೂ ಅರಭಾವಿ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮುನ್ನಡೆ ಸಿಗುವುದು ಗ್ಯಾರಂಟಿ. ಕಾರ್ಯಕರ್ತರು ವಿಶ್ವಾಸದಿಂದ ಕೆಲಸ ಮಾಡಿದರೆ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸುಲಭ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಬೆಳಗಾವಿಯ ಗೃಹ ಕಚೇ-ರಿಯಲ್ಲಿ ಶುಕ್ರವಾರ ನಡೆದ ಗೋಕಾಕ್ ಹಾಗೂ ಅರಭಾವಿ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಸಚಿವರು, ಸೋಮವಾರ (ಏಪ್ರಿಲ್ 15) ಕಾಂಗ್ರೆಸ್ ಅಭ್ಯರ್ಥಿ



ಮೃಣಾಲ್ ಹೆಬ್ಬಾಳ್ಕರ್ ನಾಮಪತ್ರ ಸಲ್ಲಿಸುತ್ತಿದ್ದು, ಈ ಎರಡು ಕ್ಷೇತ್ರಗಳಿಂದ ಹೆಚ್ಚು ಜನರು ಆಗಮಿಸಲಿದ್ದಾರೆ ಎಂದರು.

ಪಕ್ಷ ಸಂಘಟಿಸಿ, ರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಜನರಿಗೆ ಅರಿವು ಮೂಡಿಸಿ, ಮತದಾರರಿಗೆ ಸರ್ಕಾರದ ಸಾಧನೆಗಳನ್ನು ತಿಳಿಹೇಳಬೇಕು. ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗೆ ಉತ್ತಮ ವಾತಾವರಣವಿದ್ದು, ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಗೆಲುವಿಗೆ ಎಲ್ಲರೂ ಒಗ್ಗಟ್ಟಿನಿಂದ ದುಡಿಯಬೇಕು ಎಂದು ಕರೆ ನೀಡಿದರು.

**ಬೂತ್ ಕಮಿಟಿ ರಚಿಸಿ:**


ಎರಡು ಕ್ಷೇತ್ರಗಳಲ್ಲೂ ಬೂತ್ ಕಮಿಟಿ ರಚಿಸಬೇಕು. 15 ಜನರಂತೆ ಪ್ರತಿ ಬೂತ್ ಕಮಿಟಿ ರಚಿಸಬೇಕು. ಇನ್ನು ಮೂರು ದಿನಗಳಲ್ಲಿ ಕಮಿಟಿ ಸದಸ್ಯರ ಹೆಸರನ್ನು ನೀಡಬೇಕು. ಯಾರಿಗೂ ಹೆದರದೇ ಕ್ಷೇತ್ರದಲ್ಲಿ ಪಕ್ಷ ಸಂಘಟಿಸಿ ಎಂದು ಸಚಿವರು ಕರೆ ನೀಡಿದರು.

ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ಮೂಲಕ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಶಕ್ತಿ ತುಂಬಬೇಕು. ಮೃಣಾಲ್ ಹೆಬ್ಬಾಳ್ಕರ್ ಗೆದ್ದರೆ ಲಕ್ಷ್ಮೀ ಹೆಬ್ಬಾಳ್ಕರ್ ಗೆದ್ದಂತೆ ಎಂದು ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಓರ್ವ ನಿಸ್ವಾರ್ಥ ರಾಜಕಾರಣಿ, ಎಲ್ಲರೂ ಒಗ್ಗೂಡಿ ಚುನಾವಣೆ ಎದುರಿಸೋಣ. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಇನ್ನೂ ಯುವಕನಾಗಿದ್ದು, ಗೆದ್ದರೆ ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ದುಡಿಯಲಿದ್ದಾನೆ ಎಂದು ಭರವಸೆ ನೀಡಿದರು. ಕಾಂಗ್ರೆಸ್ ಸರ್ಕಾರ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ನಾಲ್ಕು ವರ್ಷಗಳ ಬಳಿಕವೂ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಭೆಯಲ್ಲಿ ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಅನಿಲಕುಮಾರ ದಳವಾಯಿ, ಚಂದನ ಗಿಡ್ನವರ್, ರಮೇಶ್ ಉಟಗಿ, ಭರಮಣ್ಣ ಉಪ್ಪಾರ್, ಕಲ್ಲಪ್ಪಗೌಡ ಲಕ್ಕಾರ್, ರಾವಸಾಹೇಬ ಬೆಳಕೋಡು, ಬಸವರಾಜ ಬೆಳಕೋಡು, ಎಸ್.ಆರ್ ಸೋನವಾಲ್ಕರ್, ಸಂಜಯ ಪೂಜಾರಿ, ಗಂಗಾಧರ್ ಬಡಕುಂದ್ರಿ, ಪ್ರಕಾಶ ಅರಳಿ, ಶಂಕರ ಹುರಕಡ್ಲಿ, ಭರಮಣ್ಣ ಉಪ್ಪಾರ, ಪ್ರಕಾಶ ಡಾಂಗೆ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಹಿರ್ದೆಸೆಗೆ ತೆರಳಿದ ಮಹಿಳೆ ಮೇಲೆ ಎರಗಿ ಬಲತ್ಕಾರ ಮಾಡಿದ ಯುವಕ



ಬೀದರ್: ಬಹಿರ್ದೆಸೆಗೆಂದು ತೆರಳಿದ ಮಹಿಳೆ ಮೇಲೆ ಏಕಾಏಕಿ ದಾಳಿ ಮಾಡಿದ ಯುವಕನೊಬ್ಬ ಬಲವಂತವಾಗಿ ಅತ್ಯಾಚಾರ ಎಸಗಿರುವ ಅಮಾನವೀಯ ಘಟನೆ ಬೀದರ್ ತಾಲೂಕಿನ ಚಾಂಬೋಳ ಗ್ರಾಮದಲ್ಲಿ ನಡೆದಿದೆ.

ಮೂವರು ಮಕ್ಕಳಿರುವ ಸಂತ್ರಸ್ತೆ ಅನಾರೋಗ್ಯವೆಂದು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದರು.

ಸರ್ಕಾರಿ ಆಸ್ಪತ್ರೆ ಹಿಂಭಾಗದಲ್ಲಿ ಬಹಿರ್ದೆಸೆಗೆ ತೆರಳಿದ್ದಾಗ ಅಲ್ಲಿಗೆ ಬಂದ ಪಾಪಿಯೊಬ್ಬ ಮಹಿಳೆ ಮೇಲೆ ಎರಗಿದ್ದಾನೆ. ಆಕೆಗೆ ಹೊಡೆದು ಬಡಿದು ಬಲವಂತವಾಗಿ ಅತ್ಯಾಚಾರ ಎಸಗಿದ್ದಾನೆ. ತೀವ್ರ ಅಸ್ವಸ್ತಳಾಗಿದ್ದ ಬಿದ್ದಿದ್ದ ಮಹಿಳೆಯನ್ನು ಗಮನಿಸಿದ ಸ್ಥಳೀಯರು ಕೂಡಲೇ ಜನವಾಡಾ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಮಹಿಳೆಯನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಸದ್ಯ ಜನವಾಡಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಪತ್ತೆಗಾಗಿ ಬಲೆ ಬೀಸಿದ್ದಾರೆ.

# ಡಿಸಿಸಿ ಬ್ಯಾಂಕ್ ಮೇಲೆ ಐ.ಟಿ. ಅಧಿಕಾರಿಗಳ ದಾಳಿ

ಬೀದರ್: ಪರಿಸರ, ಅರಣ್ಯ ಮತ್ತು ಜೀವಿಶಾಸ್ತ್ರ ಖಾತೆ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಸಹೋದರ ಅಧ್ಯಕ್ಷರಾಗಿರುವ ನಗರದ ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ (ಡಿಸಿಸಿ) ಮೇಲೆ ಆದಾಯ ತೆರಿಗೆ (ಐ.ಟಿ) ಇಲಾಖೆಯ ಅಧಿಕಾ-ರಿಗಳು ಶುಕ್ರವಾರ ದಾಳಿ ನಡೆಸಿದ್ದಾರೆ. ಕಲಬುರಗಿ, ಯಾದಗಿರಿ ಹಾಗೂ ತೆಲಂಗಾಣದ ಅಧಿಕಾರಿಗಳನ್ನು ಒಳಗೊಂಡ ತಂಡದ ಸುಮಾರು 15 ಅಧಿಕಾರಿಗಳು ಬ್ಯಾಂಕ್ ಮೇಲೆ ದಾಳಿ ನಡೆಸಿದ್ದು, ಬ್ಯಾಂಕಿನ ಮುಖ್ಯ ದ್ವಾರಗಳಿಗೆ ಬೀಗ ಜಡಿದು ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಬ್ಯಾಂಕಿನ ಅಧಿಕಾರಿ, ಸಿಬ್ಬಂದಿಯ ಮೊಬೈಲ್ ಗಳನ್ನು ಜಪ್ತಿ ಮಾಡಿದ್ದಾರೆ. ಒಳಗಿನಿಂದ ಹೊರಗೆ, ಹೊರಗಿನಿಂದ ಒಳಗೆ ಯಾರಿಗೂ ಬಿಡುತ್ತಿಲ್ಲ. ಪ್ರವೇಶ ದ್ವಾರದಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಸಚಿವ ಈಶ್ವರ ಖಂಡ್ರೆಯವರ ಮಗ ಸಾಗರ್ ಖಂಡ್ರೆ ಬೀದರ್ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸುತ್ತಿದ್ದಾರೆ. ಸಚಿವರ ಸಹೋದರ ಅಮರಕುಮಾರ್ ಖಂಡ್ರೆ ಬ್ಯಾಂಕಿನ ಅಧ್ಯಕ್ಷರಾಗಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಬೇಕಾಬಿಟ್ಟಿ ಸಾಲ ನೀಡಲಾಗುತ್ತಿದೆ ಎಂಬ ಆರೋಪಗಳ ಮೇರೆಗೆ ಈ ದಾಳಿ ನಡೆಸಲಾಗಿದೆ ಎಂದು ತಿಳಿದು ಬಂದಿದೆ.

2023ರ ಅಕ್ಟೋಬರ್ ನಲ್ಲಿ ನಡೆದ ಚುನಾವಣೆಯಲ್ಲಿ ಅಮರಕುಮಾರ್ ಖಂಡ್ರೆ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು. ಇದರೊಂದಿಗೆ ಖಂಡ್ರೆ ಹಿಡಿತನಕ್ಕೆ ಬ್ಯಾಂಕ್ ಬಂದಿತ್ತು. ಆ ಚುನಾವಣೆಯಲ್ಲಿ ಹಾಲಿ ಸಂಸದರೂ ಆದ ಕೇಂದ್ರ ಸಚಿವ ಭಗವಂತ ಖೂಬಾ ಅವರು ಖಂಡ್ರೆ ವಿರೋಧಿ ಬಣವನ್ನು ಬೆಂಬಲಿಸಿದ್ದರು. ಚುನಾವಣೆಯನ್ನು ಗಮನದಲ್ಲಿ ಇಟ್ಟುಕೊಂಡೆ ಈ ದಾಳಿ ನಡೆಸಲಾಗಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿದ್ದಾರೆ. ಡಿಸಿಸಿ ಬ್ಯಾಂಕ್ ಮೇಲೆ ಆದಾಯ ತೆರಿಗೆ ಇಲಾಖೆಯವರು ದಾಳಿ ನಡೆಸಿದ್ದಾರೆ. ಪೊಲೀಸ್ ಬಂದೋಬಸ್ತ್ ಕೇಳಿದ್ದರಿಂದ ಒದಗಿಸಲಾಗಿದೆ. ಒಳಗೇನು ನಡೆಯುತ್ತಿದೆ ನಮಗೆ ಗೊತ್ತಿಲ್ಲ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚನ್ನಬಸವಣ್ಣ ಎಸ್.ಎಲ್. ತಿಳಿಸಿದ್ದಾರೆ.

# ಬೆಂಗಳೂರು ಗ್ರಾಮಾಂತರ ಕ್ಷೇತ್ರ ಗೆಲ್ಲಲು ಇನ್ನಿಲ್ಲದ ಕಸರತ್ತು; ಅಣ್ಣ-ತಮ್ಮನಿಂದ ಗೂಂಡಾಗಿರಿ: ಬಿಜೆಪಿ, ಜೆಡಿಎಸ್ ವಾಗ್ದಾಳಿ

ರಾಮನಗರ: ಬಿಜೆಪಿ ಕಾರ್ಯಕರ್ತ ನವೀನ್ ಅವರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿರುವ ವಿಚಾರದಲ್ಲಿ ಕರ್ನಾಟ ಬಿಜೆಪಿ ರಾಜ್ಯ ಸರ್ಕಾರ ಹಾಗೂ ಸಿಎಂ ಸಿದ್ದರಾಮಯ್ಯ ಅವರನ್ನು ತರಾಟೆಗೆ ತೆಗೆದುಕೊಂಡಿದೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ್ ಬೆಂಗಳೂರು ಗ್ರಾಮಾಂತರದಲ್ಲಿ ಸೋಲು ಗ್ಯಾರೆಂಟಿ ಆಗುತ್ತಿದ್ದಂತೆ, ಶಾಶ್ವತವಾಗಿ ಅಒ-ಞಟ-ತಿಚಿಣಟಿರ ಆಗಿ ಉಳಿಯಬೇಕಾಗುತ್ತಲ್ಲಾ ಎನ್ನುವ ಹತಾಶೆಯಿಂದ ಕಂಗಾಲಾಗಿರುವ ಆ ಏ ಖುತಚಿಇಣಟಚಿಡಿ ಹಾಗೂ ಅವರ ಸಹೋದರ ಆ ಏ ಖಣಡಿಝು ಮತದಾರರ ಮೇಲಿನ ಕೋಪಕ್ಕೆ ಗೂಂಡಾಗಿರಿಗೆ ಇಳಿದಿದ್ದಾರೆ.

ಬೆಂಗಳೂರು ಗ್ರಾಮಾಂತರದಲ್ಲಿ ಸೋಲು ಗ್ಯಾರೆಂಟಿ ಆಗುತ್ತಿದ್ದಂತೆ, ಶಾಶ್ವತವಾಗಿ CM-in-waiting ಆಗಿ ಉಳಿಯಬೇಕಾಗುತ್ತಲ್ಲಾ ಎನ್ನುವ ಹತಾಶೆಯಿಂದ ಕಂಗಾಲಾಗಿರುವ @ DKShivakumar ಹಾಗೂ ಅವರ ಸಹೋದರ @DKSureshINC ಮತದಾರರ ಮೇಲಿನ ಕೋಪಕ್ಕೆ ಗೂಂಡಾಗಿರಿಗೆ ಇಳಿದಿದ್ದಾರೆ.

ಬಿಜೆಪಿ ಕಾರ್ಯಕರ್ತ ಸಹೋದರ ನವೀನ್ ಮೇಲೆ ಕಾಂಗ್ರೆಸ್ಸಿನ ಗೂಂಡಾಗಳು ಮಾರಣಾಂತಿಕ ಹಲ್ಲೆ ಮಾಡಿದ್ದರೂ ಆತನನ್ನು ಬಂಧಿಸದೆ ಕಾಟಾಚಾರಕ್ಕೆ ಕೇಸ್ ಹಾಕುವ ಮೂಲಕ ಯಾರನ್ನು ರಕ್ಷಣೆ ಮಾಡುತ್ತಿದ್ದೀರಿ ಸಿಎಂ ಖುಜ-ಜಚಿಡಿಚಿಟಚುಚ್ಝು ನವರೇ? ಸ್ಟ್ರಾಂಗ್



ಸಿಎಂ ಎಂದು ಹೇಳಿಕೊಳ್ಳುವ ನೀವು ಡಿಕೆ ಸಹೋದರದ ಮುಂದೆ ಅಷ್ಟೊಂದು ವೀಕ್ ಯಾಕಾಗಿದ್ದೀರಿ? ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮತದಾರರು ನಿರ್ಭೀತಿಯಿಂದ ಮತದಾನ ಮಾಡುವ ವಾತಾವರಣ ಕೆಡಿಸಿ ಮತದಾರರಲ್ಲಿ ಭಯದ ವಾತಾವರಣ ಸೃಷ್ಟಿ ಮಾಡುವ ಈ ದುಷ್ಕೃತ್ಯಕ್ಕೆ ಚುನಾವಣಾ ಆಯೋಗ ಕಡಿವಾಣ ಹಾಕಬೇಕು. ಕಾಂಗ್ರೆಸ್ ಪಕ್ಷದ ವಿರುದ್ಧ ಕ್ರಮಕೈಗೊಂಡು ನಿಷ್ಪಕ್ಷಪಾತವಾಗಿ ಅವಕಾಶ ಕಲ್ಪಿಸಿ, ಮತದಾರರಲ್ಲಿ ಧೈರ್ಯ, ವಿಶ್ವಾಸ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಚುನಾವಣೆ ಸಮಯದಲ್ಲಿ ಕಾಂಗ್ರೆಸ್ ಗೂಂಡಾಗಳು ಸಕ್ರಿಯಗೊಂಡಿದ್ದಾರೆ. ಅವರನ್ನು ಮಜಾವಾದಿ ಸಿದ್ದರಾಮಯ್ಯ ಸರ್ಕಾರ ರಕ್ಷಣೆ ಮಾಡುತ್ತಿದೆ. ರೇಷ್ಮೆ ಬೆಳೆಗಾರ ಹಾಗೂ ಬಿಜೆಪಿ ಕಾರ್ಯಕರ್ತ ನವೀನ್ ಮೇಲೆ ಕಾಂಗ್ರೆಸ್ಸಿನ ಗೂಂಡಾ ಮಾರಣಾಂತಿಕ ಹಲ್ಲೆ ಮಾಡಿದ್ದರೂ ಆತನನ್ನು ಬಂಧಿಸದೆ ಸಣ್ಣ ಕೇಸ್ ಹಾಕಿ ರಾಜಾರೋಷವಾಗಿ ಬೀದಿಗೆ ಬಿಟ್ಟಿದೆ.

ಚುನಾವಣೆ ಗೆಲ್ಲಲು ಗೂಂಡಾಗಿರಿ ಮಾಡುತ್ತಿರುವ ಅಣ್ಣ-ತಮ್ಮ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇನ್ನಿಲ್ಲದ ಕಸರತ್ತು ನಡೆಸುತ್ತಿದ್ದಾರೆ. ಅದರ ಮುಂದುವರಿದ ಭಾಗವೇ ಬಿಜೆಪಿ ಕಾರ್ಯಕರ್ತರ ಮೇಲೆ ಹಲ್ಲೆ . ಅದೇ ರೀತಿ ಮತದಾರರನ್ನು ಬೆದರಿಸುವ ಕೆಲಸ ಮಾಡಲಾಗುತ್ತಿದೆ. ಕೂಡಲೇ ಚುನಾವಣಾ ಆಯೋಗ ಕಾಂಗ್ರೆಸ್ ಪಕ್ಷದ ವಿರುದ್ಧ ಕ್ರಮಕೈಗೊಂಡು ನಿಷ್ಪಕ್ಷಪಾತವಾಗಿ ರಾಜ್ಯದಲ್ಲಿ ಚುನಾವಣೆ ನಡೆಯಲು ಅವಕಾಶ ಕಲ್ಪಿಸಿ, ಮತದಾರರಲ್ಲಿ ಧೈರ್ಯ ತುಂಬಬೇಕಿದೆ ಎಂದು ಬಿಜೆಪಿ ಟ್ವೀಟ್ ಮಾಡಿದೆ.

ಸರಕಾರ ಈ ಕೂಡಲೇ ದೌರ್ಜನ್ಯ ನಡೆಸಿರುವ ಅಪರಾಧಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಚುನಾವಣಾ ಆಯೋಗ ನಿರ್ಭೀತಿಯಿಂದ ಚುನಾವಣೆ ನಡೆಸಲು ಸೂಕ್ತ ಕ್ರಮ ಜರುಗಿಸಬೇಕು ಎಂದು ಜೆಡಿಎಸ್ ಆಗ್ರಹಿಸಿದೆ.

# 6 ವರ್ಷದ ಕಂದಮ್ಮನ ಮೇಲೆ ಬಾಲಕನಿಂದ ಲೈಂಗಿಕ ದೌರ್ಜನ್ಯ

ಏನೂ ಅರಿಯದ 6 ವರ್ಷದ ಪುತ್ತ ಕಂದಮ್ಮನ ಮೇಲೆ ದುರುಳ ಬಾಲಕನೊಬ್ಬ ಲೈಂಗಿಕ ದೌರ್ಜನ್ಯವೆಸಗಿರುವ ಘಟನೆ ಉತ್ತರ ಪ್ರದೇಶದ ಆಗ್ರಾದಲ್ಲಿ ನಡೆದಿದೆ.

4ನೇ ತರಗತಿಯಲ್ಲಿ ಓದುತ್ತಿದ್ದ 11 ವರ್ಷದ ಬಾಲಕ 6 ವರ್ಷದ ಬಾಲಕಿ ಮೇಲೆ ಪೈಶಾಕಿಕ ಕೃತ್ಯವೆಸಗಿದ್ದು, ಬಾಲಕಿ ಸ್ಥಿತಿ ಚಿಂತಾಜನಕವಾಗಿದೆ. ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬಾಲಕಿ ತಂದೆ ನೀಡಿದ ದೂರಿನ ಹಿನ್ನೆಲೆಯಲ್ಲಿ



ಎಫ್ ಐ ಆರ್ ದಾಖಲಿಸಿಕೊಂಡಿರುವ ಪೊಲೀಸರು ಬಾಲಕನನ್ನು ವಶಕ್ಕೆ ಪಡೆದು ಬಾಲಾಪರಾಧಿಗಳ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ.



# ಗನ್ ಜೊತೆ ಆಟವಾಡುತ್ತಿದ್ದ ಬಾಲಕನಿಗೆ ಮಿಸ್ ಫೈರ್; ಗುಂಡೇಟು ತಗುಲಿ ಬಾಲಕ ಸಾವು

ಏರ್ ಗನ್ ಜೊತೆ ಆಟವಾಡುತ್ತಿದ್ದ ಬಾಲಕ ಗನ್ ಮಿಸ್ ಫೈರ್ ಆಗಿ ಗುಂಡೇಟು ತಗುಲಿ ಸಾವನ್ನಪ್ಪಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮಲ್ಲೇನಹಳ್ಳಿಯಲ್ಲಿ ನಡೆದಿದೆ.

ಪೋಷಕರ ಬೇಜವಾಬ್ದಾರಿಗೆ ಹೆತ್ತ ಮಗು ಬಲಿಯಾದಂತಾಗಿದೆ. ಮಿಸ್ ಫೈರ್ ಆಗಿ ಗುಂಡೇಟು ಮಗುವಿನ ದೇಹದೊಳಗೆ ಹೊಕ್ಕಿದೆ. 7 ವರ್ಷದ ಬಾಲಕ ವಿಷ್ಣು ಮೃತ ದುರ್ದೈವಿ.

ಕಾಫಿ ತೋಟದಲ್ಲಿ ಮಂಗಗಳನ್ನು ಓಡಿದ್ದುವ ಏರ್ ಗನ್ ಜೊತೆ ಬಾಲಕ ಮನೆ ಮುಂದೆ ಆಟವಾಡುತ್ತಿದ್ದ.

ಈ ವೇಳೆ ಆಕಸ್ಮಿಕವಾಗಿ ಬಾಲಕ ಟ್ರಿಗರ್ ಒತ್ತಿದ್ದಾನೆ. ಪರಿಣಾಮ ಏರ್ ಗನ್ ಫೈರ್ ಆಗಿ ವಿಷ್ಣು ದೇಹಕ್ಕೆ ಹೊಕ್ಕಿದೆ.

ಚಿಕ್ಕಮಗಳೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


# ಚುನಾವಣಾ ಜಾಹೀರಾತು-ಪೂರ್ವಾನುಮತಿ ಕಡ್ಡಾಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಬೆಳಗಾವಿ ಲೋಕಸಭಾ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿ-ಕ ಜಾಲತಾಣಗಳಲ್ಲಿ ಜಾಹೀರಾತು ಹಾಗೂ ಬಲ್ಕ್ ಎಸ್ಎಂಎಸ್‌ಗಳನ್ನು ಪ್ರಚುರಪಡಿಸುವ ಮುಂಚೆ ಜಿಲ್ಲಾಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾರ್ಯನಿರ್ವಹಿಸುವ ಎಂಸಿಎಂಸಿ ಸಮಿತಿಯು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಗೊಳ್ಳುವ ಚುನಾವಣಾ ವಿಷಯ ಹಾಗೂ ಅವುಗಳ ವಿಷಯವಸ್ತು(ಕಂಟೆಂಟ್) ಪರಿಶೀಲಿಸಿ ಅನುಮತಿ ನೀಡಲಿದೆ.

ಸ್ಥಳೀಯ ಕೇಬಲ್ ನೆಟವರ್ಕ, ಟಿವಿ ಚಾನೆಲ್‌ಗಳು, ಖಾಸಗಿ ಎಫ್‌ಎಂ ರೇಡಿಯೋ ಕೇಂದ್ರಗಳು, ಸಿನಿಮಾಮಂದಿರಗಳು, ಸಾಮಾಜಿಕ ಜಾಲತಾಣಗಳು ಹಾಗೂ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳು ಯಾವುದೇ ರೀತಿಯ ಚುನಾವಣಾ ಜಾಹೀರಾತು ಅಥವಾ ಬಲ್ಕ್ ಎಸ್‌ಎಂ-ಎಸ್ ಪ್ರಸಾರ ಮಾಡುವ ಮುಂಚೆ ಎಂಸಿ-ಎಂಸಿ ನೀಡಿರುವ ಪೂರ್ವಾನುಮತಿ ಪ್ರಮಾಣಪತ್ರವನ್ನು ಜಾಹೀರಾತು ನೀಡುವ ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗಳ ಕಡೆಯಿಂದ ಪಡೆದುಕೊಳ್ಳಬೇಕು.

ಭಾರತ ಚುನಾವಣಾ ಆಯೋಗದ ನಿರ್ದೇಶನಗಳು ಮತ್ತು ಚಾಲ್ತಿಯಲ್ಲಿರುವ ವಿವಿಧ ನಿಯಮಾವಳಿಗಳನ್ನು ಪಾಲಿಸುವ ಮೂಲಕ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಎಲ್ಲ ಮಾಧ್ಯಮದವರು ಹಾಗೂ ರಾಜಕೀಯ ಪಕ್ಷದ ಪ್ರತಿನಿಧಿಗಳು ಸಹಕ-ರಿಸಬೇಕು.



**ಮಾಧ್ಯಮಗಳ ಮೇಲೆ ನಿಗಾ:**

ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ತಕ್ಷಣದಿಂದಲೇ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಕಟವಾಗುವ ಚುನಾವಣಾ ಜಾಹೀರಾತು ಮತ್ತು ಸಂದೇಹಾಸ್ಪದ ಪೇಡ್‌ನ್ಯೂಸ್‌ಗಳ ಮೇಲೆ ನಿಗಾ ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಸಮಿತಿಯು ಮುದ್ರಣ, ವಿದ್ಯುನ್ಮಾನ ಮಾಧ್ಯಮಗಳಾದ ಕೇಬಲ್ ಚಾನೆಲ್/ಟಿವಿ ಚಾನೆಲ್‌ಗಳು, ರೇಡಿಯೋ ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇಡಲಿದ್ದು, ಅನುಮತಿ ಪಡೆಯದೇ ಚುನಾವಣಾ ಜಾಹೀರಾತು ನೀಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಿದೆ.

ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಪರವಾಗಿ ಜಾಹೀರಾತುಗಳನ್ನು ಪ್ರಕಟಿಸಿದ ಸಂದರ್ಭದಲ್ಲಿ ಆಯಾ ಮಾಧ್ಯಮಗಳಿಗೆ ನಿಗದಿಪಡಿಸಲಾದ ಜಾಹೀರಾತು ದರ ಅಥವಾ ಆಯಾ ಮಾಧ್ಯಮಗಳ ವಾಸ್ತವಿಕ ವಾಣಿಜ್ಯ ಜಾಹೀರಾತು ದರ ಪರಿಗಣಿಸಿ ಅದರ ಮೊತ್ತವನ್ನು ಪಕ್ಷ ಅಥವಾ ಅಭ್ಯರ್ಥಿಯ ಚುನಾವಣಾ ವೆಚ್ಚಕ್ಕೆ ಸೇರಿಸಲು ಚುನಾವಣಾ ವೆಚ್ಚ ವೀಕ್ಷಕರಿಗೆ ಸಮಿತಿಯು ಮಾಹಿತಿ ನೀಡಲಿದೆ.

ಅದೇ ರೀತಿಯಲ್ಲಿ ಯಾವುದೇ ಮಾಧ್ಯಮದಲ್ಲಿ ಪ್ರಸಾರವಾದ ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಪಡೆಯಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗವುದು. ಅಭ್ಯರ್ಥಿಯ ಅಥ-'ವಾ ಪಕ್ಷದ ಒಪ್ಪಿಗೆಯಿಂದ ನೀಡಲಾಗಿರುವ ಜಾಹೀರಾತುಗಳ ವೆಚ್ಚವನ್ನು ಸಂಬಂಧಪಟ್ಟ ಪಕ್ಷ ಅಥವಾ ಅಭ್ಯರ್ಥಿಯ ವೆಚ್ಚಕ್ಕೆ ಸೇ-ರಿಸಲಾಗುತ್ತದೆ.

**ಮೀಡಿಯಾ ಮಾನಿಟರಿಂಗ್ ಸೆಲ್:**

ಚುನಾವಣಾ ಜಾಹೀರಾತುಗಳ ಪರಿಶೀಲನೆ ಮತ್ತು ಪೂರ್ವಾನುಮತಿ(ಪ್ರಿಸರ್ಟಿಫಿಕೇಷನ್) ಗಾಗಿ "ವಾರ್ತಾಭವನ" ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನ್ಯಾಯಾಲಯ ಆವರಣ" (ದೂರವಾಣಿ ಸಂಖ್ಯೆ-9480841233) ಈ ಕಚೇರಿಯಲ್ಲಿ ಮೀಡಿಯಾ ಮಾನಿಟರಿಂಗ್ ಕೇಂದ್ರ ಸ್ಥಾಪಿಸಲಾಗಿರುತ್ತದೆ.

ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಪೂರ್ವಾನುಮತಿ ಪಡೆಯಲು ಈ ಕೇಂದ್ರದಲ್ಲಿ ಅರ್ಜಿ ನಮೂನೆಗಳು ಲಭ್ಯವಾಗಿರುತ್ತವೆ.

ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಭರ್ತಿ ಮಾಡಿದ ಅರ್ಜಿ ಜತೆಗೆ ಜಾಹೀರಾತಿನ ಎರಡು ಸಿಡಿ ಹಾಗೂ ಹಸ್ತಪ್ರತಿ(ಸ್ಕ್ರಿಪ್ಟ್) ಸಲ್ಲಿಸಬೇಕು.

ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು(ಎಂಸಿಎಂಸಿ) ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ, ಪೂರ್ವಾನುಮತಿ ನೀಡಲಿದೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾರನ್ನು ದ್ವೇಷಿಸುವವರು, ಕಷ್ಟಕೊಡುವವರು ನಾವಲ್ಲ; ಕಷ್ಟದಲ್ಲಿರುವವರಿಗೆ ಸಹಾಯ ಮಾಡುವ ಸಂಸ್ಕೃತಿ ನಮ್ಮದು: ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: 20 ವರ್ಷ ಬೆಳಗಾವಿ ಲೋಕಸಭಾ ಕ್ಷೇತ್ರವನ್ನು ಪ್ರತಿನಿಧಿಸಿದ್ದ ಬಿಜೆಪಿ ಸಂಸದರು ಕೇಂದ್ರ ಸರಕಾರದಿಂದ ಎಷ್ಟು ಕೆಲಸ ತಂದಿದ್ದಾರೆ? ಕ್ಷೇತ್ರದ ಯಾವ ಯಾವ ಪ್ರದೇಶಕ್ಕೆ ಭೇಟಿ ನೀಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದ್ದಾರೆ.

ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಪ್ರದೇಶದಲ್ಲಿ ಗುರುವಾರ ಸಂಜೆ ಲೋಕಸಭಾ ಚುನಾವಣೆ ಪ್ರಚಾರ ನಡೆಸಿದ ಅವರು, ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ 10 ತಿಂಗಳಲ್ಲಿ ಸಾವಿರ ಕೋಟಿ ರೂ. ಕೆಲಸಗಳಾಗಿವೆ. ಅಲ್ಲಿ ಅಭಿವೃದ್ಧಿ ಕೆಲಸಗಳು ನಿರಂತರವಾಗಿ ನಡೆಯುತ್ತಿವೆ. ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನು ಆಯ್ಕೆ ಮಾಡಿದಲ್ಲಿ ಗ್ರಾಮೀಣ ಕ್ಷೇತ್ರದ ಮಾದರಿಯಲ್ಲೇ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳನ್ನು ಮಾಡಿಸಲಾಗುವುದು ಎಂದು ತಿಳಿಸಿದರು.

2014ರಲ್ಲಿ ನಾನು ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದ್ದಾಗ ಅತ್ಯಂತ ಕಡಿಮೆ ಅಂತರದಿಂದ ಸೋತಿದ್ದೆ. ಈಗ ನನ್ನ ಮಗ ಇಲ್ಲಿ ಸ್ಪರ್ಧಿಸುತ್ತಿದ್ದಾನೆ. ಈ ಬಾರಿ ಪ್ರಚಾರಾರ್ಥ ಎಲ್ಲೇ ಹೋದರೂ ಜನರು ಅತ್ಯಂತ ಪ್ರೀತಿ ತೋರಿಸುತ್ತಿದ್ದಾರೆ. ಯುವಕನಾಗಿರುವ, ಇದೇ ಕ್ಷೇತ್ರದ ಮಗನನ್ನು ಆಯ್ಕೆ ಮಾಡುವ ಮೂಲಕ ನಿಮ್ಮ ಸೇವೆ ಮಾಡುವ ಅವಕಾಶ ಮಾಡಿಕೊಡಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ಬದ್ಧತೆ ಹೊಂದಿರುವ ಪಕ್ಷ. ಎಲ್ಲರನ್ನೂ ಸಮಾನವಾಗಿ ನೋಡುವ ಪಕ್ಷ ಕಾಂಗ್ರೆಸ್. ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ. ಯಾರನ್ನೂ ದ್ವೇಷದಿಂದ ನೋಡುವ ಸಂಸ್ಕೃತಿ ನಮ್ಮದಲ್ಲ. ಯಾರಿಗೂ ಕಷ್ಟಕೊಡುವವರು ನಾವಲ್ಲ, ಕಷ್ಟದಲ್ಲಿದ್ದವರನ್ನು ಪಾರು ಮಾಡುವ ಸಂಸ್ಕೃತಿ ನಮ್ಮದು ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.



ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಈ ಚುನಾವಣೆ ಸ್ವಾಭಿಮಾನದ ಚುನಾವಣೆ. ಏನೇ ಹೇಳಿದರೂ ಹೊರಗಿನವರಿಗೆ ನಮ್ಮ ಊರಿನ ಮೇಲೆ ಪ್ರೀತಿ ಬರಲು ಸಾಧ್ಯವೇ ಇಲ್ಲ. ಇಲ್ಲಿಯ ಸಮಸ್ಯೆಗಳೂ ಅವರಿಗೆ ಗೊತ್ತಿರುವುದಿಲ್ಲ. ಅಲ್ಲೇ ಏನೂ ಕೆಲಸ ಮಾಡದವರು ಇಲ್ಲಿ ಬಂದು ಏನು ಕೆಲಸ ಮಾಡಲು ಸಾಧ್ಯ? ಎಂದು ಪ್ರಶ್ನಿಸಿದರು.

ಬೆಳಗಾವಿ ದಕ್ಷಿಣ ಕ್ಷೇತ್ರ ಸೇರಿದಂತೆ ನಾನು ಇಡೀ ಕ್ಷೇತ್ರದಲ್ಲಿ ಕಳೆದ 10 ವರ್ಷದಿಂದ ಓಡಾಡುತ್ತಿದ್ದೇನೆ. ಸ್ಥಳೀಯನಾಗಿದ್ದರಿಂದ ಇಲ್ಲಿನ ಜನರು ನನಗೆ ಚಿರಪರಿಚಿತರು.

ಕ್ಷೇತ್ರದ ಸಮಸ್ಯೆ ಮತ್ತು ಅಭಿವೃದ್ಧಿ ಕುರಿತು ನನಗೆ ಸ್ಪಷ್ಟವಾದ ಕಲ್ಪನೆ ಇದೆ. ಹಾಗಾಗಿ ನನ್ನನ್ನು ಆಯ್ಕೆ ಮಾಡಿದಲ್ಲಿ ಮುಂದಿನ 5 ವರ್ಷ ಅವಿಶ್ರಾಂತವಾಗಿ ಕೆಲಸ ಮಾಡುತ್ತೇನೆ ಎಂದು ಅವರು ತಿಳಿಸಿದರು.

ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವಡಗಾವಿಯ ವಜೆ ಗಲ್ಲಿಯಲ್ಲಿ ಸಾರ್ವಜನಿಕ ಸಭೆ, ಅನಗೋಳದಲ್ಲಿ ಜೈನ ಸಮಾಜದ ಸಭೆ, ವಡಗಾವಿ ಹಾಗೂ ಖಾಸಬಾಗದಲ್ಲಿ ಯುವಕ ಸಂಘಗಳ ಸಭೆಗಳಲ್ಲಿ ಮತ ಯಾಚಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಪ್ರದೀಪ ಎಂ.ಜೆ., ಪರಶುರಾಮ ಢಗೆ, ವಸಂತ ನಾಗೂಜಿಚೆ, ದತ್ತಾ ಪವಾರ, ಪ್ರಭಾಕರ ಹಟ್ಟಿಕರ್, ಆನಂದ ಮಾಳವಿ, ಮೀನಾಕ್ಷಿ ನಲವಡೆ, ಮಾಧುರಿ ಜಾಧವ, ಲಕ್ಷ್ಮೀ ಲುಕುರೆ, ರಮೇಶ ಸೊಂಟಕ್ಕಿ, ವೈಶಾಲಿ ಸುತಾರ, ಗಜಾನನ ಜಾಧವ, ಯಲ್ಲಪ್ಪ ಜಾಧವ, ಶ್ರೀಕಾಂತ ಲುಕುರೆ, ಸುನೀಲ ಹನಮಣ್ಣವರ, ರಾಜೇಂದ್ರ ಹನಮಣ್ಣವರ, ಪುಷ್ಪ ಹನಮಣ್ಣವರ, ರಾಜಶೇಖರ ಬೆಂಡಿಗೇರಿ, ಭರತಕುಮಾರ್ ಗಡ್ಕರಿ, ಜಯಗೌಡ ಪಾಟೀಲ, ರಾಜೇಂದ್ರ ಜಕ್ಕನವರ, ಪ್ರಭಾವತಿ ಮಾಸ್ತಮರಡಿ, ಶೀತಲ್ ಮಠಪತಿ, ಸಿಖಂದರ್ ಜಮಾದಾರ, ಕಿರಣ ಪಾಟೀಲ, ಸಿರಿಲ್ ಪ್ರಭು, ಆದಿನಾಥ ಯುವಕ ಮಂಡಳದವರು, ಬ್ರಾಹ್ಮಿ ಮಹಿಳಾ ಮಂಡಳದ ಸದಸ್ಯರು ಮುಂತಾದವರು ಉಪಸ್ಥಿತರಿದ್ದರು.

## ಡಾ. ಬಿ. ಆರ್.ಅಂಬೇಡ್ಕರ್, ಶ್ರೀರಾಮ ನವಮಿ, ಮಹಾವೀರ ಜಯಂತಿ ನಿಮಿತ್ಯ ಎಲ್ಲ ಮಾಂಸಹಾರಿ ಅಂಗಡಿಗಳು ಬಂದ

ಬೆಳಗಾವಿ: ಡಾ. ಬಿ. ಆರ್. ಅಂಬೇಡ್ಕರ್ ಜಯಂತಿ ಏ.14 (ರವಿವಾರ) ರಂದು, ಏ.17 ರಂದು ಶ್ರೀರಾಮ ನವಮಿ ಜಯಂತಿ ಏ.21 ರಂದು ಮಹಾವೀರ ಜಯಂತಿ ನಿಮಿತ್ಯ ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಸಾಯಿಖಾನೆ ಅಥವಾ ಮಾಂಸ ಮಾರಾಟ ಅಂಗಡಿಗಳನ್ನು ಬಂದ ಮಾಡುವುದು ಕಡ್ಡಾಯವಾಗಿರುತ್ತದೆ.

ಸದರಿ ದಿನಗಳಂದು ಅಂಗಡಿ ಮಾಲೀಕರು ಉಲ್ಲಂಘನೆ ಮಾಡಿರುವುದು ಕಂಡು ಬಂದರೆ ಅಂತಹ ಮಾಲೀಕರುಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್.ಎಸ್.ಎಲ್.ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರ: ನಿಪ್ಪಾಣಿಯಲ್ಲಿ ಪ್ರಾರಂಭ

ಬೆಳಗಾವಿ: 2023-24 ನೇ ಸಾಲಿನ ಮಾರ್ಚ್/ಎಪ್ರಿಲ್ ತಿಂಗಳಲ್ಲಿ ಜರುಗಿದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವು ಏ.15 ರಿಂದ ನಿಪ್ಪಾಣಿ ನಗರದ ವಿವಿಧ ಮೌಲ್ಯಮಾಪನ ಕೇಂದ್ರಗಳಲ್ಲಿ ಪ್ರಾರಂಭವಾಗಲಿದೆ.

ಸದರಿ ಮೌಲ್ಯ ಮಾಪನ ಕೇಂದ್ರಗಳಲ್ಲಿ ಸಮಾಜ ವಿಜ್ಞಾನ ವಿಷಯದ ಮೌಲ್ಯಮಾಪನ ಕೇಂದ್ರವನ್ನು ವಿ.ಎಸ್.ಎಂ ಬಾಲಿಕಾ ಪ್ರೌಢ ಶಾಲೆಯ ಬದಲಾಗಿ ಮರಾಠ ಮಂಡಳ ಪ್ರೌಢ ಶಾಲೆ ನಿಪ್ಪಾಣಿಯಲ್ಲಿ ಬದಲಾವಣೆ ಮಾಡಲಾಗಿದೆ.

ಸಮಾಜ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದಂತೆ ಮಾತ್ರ ಮೌಲ್ಯಮಾಪನ ಕೇಂದ್ರಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು, ಶಿಕ್ಷಕರು, ಮೌಲ್ಯಮಾಪಕರು ಏ.15 ರಂದು ಮರಾಠ ಮಂಡಳ ಪ್ರೌಢ ಶಾಲೆ ನಿಪ್ಪಾಣಿಯಲ್ಲಿ ಹಾಜರಾಗಿ ವರದಿಮಾಡಿಕೊಳ್ಳುವಂತೆ ಚಿಕ್ಕೋಡಿ ಆಡಳಿತ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಂ.ಎಲ್ ಹಂಚಾಟೆ ಅವರು ಪ್ರಕಟಣೆಯಲ್ಲಿ ನೀಡಿದ್ದಾರೆ.

## ಏ.16 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಮುಂದೂಡಿಕೆ

ಬೆಳಗಾವಿ: ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಮೆ:ಶಿವಶಕ್ತಿ ಸ್ಟೋನ್ ಕ್ರಷರ್ ಅವರು ಅಂಬೇವಾಡೆ ಗ್ರಾಮದ ಸರ್ವೆ ನಂ.59/11,16,17 ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆಯ ಒಟ್ಟು 4.26 ಎಕರೆ (1.882 ಹೆಕ್ಟೇರ್) ಪ್ರದೇಶದಲ್ಲಿ ವಾರ್ಷಿಕ 70,460 ಟನ್ (ಐದು ವರ್ಷಕ್ಕೆ) ಕಟ್ಟಡ ಕಲ್ಲು ಗಣಿಗಾರಿಕೆ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಿಲಾಗಿದ್ದು, ಸದರಿ ಕೈಗಾರಿಕೆ ಪರಿಸರ ಸಾರ್ವಜಿಕ ಆಲಿಕೆ ಸಭೆಯು ಮುಂದೂಡಿಸಲಾಗಿದೆ.

ಸರದಿ ಲೋಕಸಭಾ ಚುನಾವಣೆ ನಿಮಿತ್ಯ ಮಾದರಿ ನೀತಿ ಸಂಹಿತೆ ಜಾರಿ ಇರುವುದರಿಂದ ಜಿಲ್ಲಾಧಿಕಾರಿಗಳು ಪರಿಸರ ಸಾರ್ವಜನಿಕ ಆಲಿಕೆ ಸಭೆಯು ಏ.16ಕ್ಕೆ ಮುಂದೂಡಿರುತ್ತಾರೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರನ ಮಂಡಳಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.13 ರಂದು ಆದ್ಯವಚನಕಾರ ದೇವರ ದಾಸಿಮಯ್ಯನವರ ಜಯಂತಿ

ಬೆಳಗಾವಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆದ್ಯವಚನಕಾರ ಶ್ರೀ ದೇವರದಾಸಿಮಯ್ಯನವರ ಜಯಂತಿಯನ್ನು ಏ.13 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಯುಸಿ ಪರೀಕ್ಷೆ: ಆಕಾಶ್ ಶ್ರೀಶೈಲ್ ಕಂಕಣವಾಡಿ ಅತ್ಯುತ್ತಮ ಸಾಧನೆ



ಬೆಳಗಾವಿ: ಇಲ್ಲಿನ ಆಕಾಶ್ ಶ್ರೀಶೈಲ್ ಕಂಕಣವಾಡಿ ಇತ್ತೀಚೆಗೆ ನಡೆದ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಪರೀಕ್ಷೆಯ ಪಿ.ಸಿ.ಎಂ.ಬಿ. ವಿಷಯಗಳಲ್ಲಿ ಶೇ.99.50 ಅಂಕ ಗಳಿಸುವ ಮೂಲಕ ಅತ್ಯುತ್ತಮ ಸಾಧನೆಗೈದಿದ್ದಾರೆ.

ಮಂಗಳೂರಿನ ಎಕ್ಸಪರ್ಟ್ ಕಾಲೇಜಿನ ವಿದ್ಯಾರ್ಥಿಯಾಗಿರುವ ಆಕಾಶ್, ಬೆಳಗಾವಿ ಜಿಲ್ಲೆಯ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಾಗಿರುವ ಶ್ರೀಶೈಲ್ ಕಂಕಣವಾಡಿ ಅವರ ಪುತ್ರನಾಗಿದ್ದಾರೆ.

ಸದ್ಯಕ್ಕೆ ಮಂಗಳೂರು ಎಕ್ಸಪರ್ಟ್ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಮುಗಿಸಿ ನೀಟ್ ಓದುತ್ತಿದ್ದು, ಈಚೆಗೆ ನಡೆದ ಜೆಇಇ (ಮೇನ್ಸ್) ಪರೀಕ್ಷೆಯಲ್ಲೂ ಶೇ.99.33 ಅಂಕ ಗಳಿಸುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

# ಏ.21 ರಂದು ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವ ಆಚರಣೆ

ಬೆಳಗಾವಿ: ಪ್ರತಿ ವರ್ಷದಂತೆ ಈ ವರ್ಷವೂ ಸಹ ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವವನ್ನು ಏಪ್ರಿಲ 21 ರಂದು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಶ್ರೀ. ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವ ಮಧ್ಯವರ್ತಿ ಉತ್ಸವ ಸಮಿತಿ ಗೌರವ ಕಾರ್ಯದರ್ಶಿ ರಾಜೇಂದ್ರ ಜೈನ ಅವರು ಇಂದಿಲ್ಲಿ ಹೇಳಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 25 ವರ್ಷಗಳಿಂದ ಬೆಳಗಾವಿಯಲ್ಲಿ ದಿಗಂಬರ ಮತ್ತು ಶ್ವೇತಾಂಬರ ಜೈನ ಸಮಾಜದವರು ಒಂದಾಗಿ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವವನ್ನು ಆಚರಿಸುತ್ತ ಬಂದಿದ್ದಾರೆ. 25 ವರ್ಷಗಳ ಹಿಂದೆ ಅಂದಿನ ಆದಾಯ ತೆರಿಗೆ ಆಯುಕ್ತರಾದ ನರೇಂದ್ರ ಜೈನ ಅವರ ಮಾರ್ಗದರ್ಶನದಲ್ಲಿ ಈಉತ್ಸವ ಆರಂಭವಾಯಿತು. ಅಂದಿನಿಂದ ಇಂದಿನವರೆಗೆ ಉತ್ಸವ ನಿರಂತರವಾಗಿ ನಡೆದುಕೊಂಡು ಬಂದಿದೆ ಎಂದು ಅವರು ತಿಳಿಸಿದರು.




ಜನ್ಮ ಕಲ್ಯಾಣಕ ಮಹೋತ್ಸವದ ಅಂಗವಾಗಿ ಬೆಳಗಾವಿಯಲ್ಲಿ ವಿವಿಧ ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸೋಮವಾರ ಏ.15 ರಂದು ಬೆಳಿಗ್ಗೆ 9 ಗಂಟೆಗೆ ಭರತೇಶ ಶಿಕ್ಷಣ ಸಂಸ್ಥೆಯಲ್ಲಿ ಭೃಹತ್ತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಮಂಗಳವಾರ ಏ.16 ರಂದು ಮಹಾವೀರ ಭವನದಲ್ಲಿ ಬೆಳಿಗ್ಗೆ 10 ರಿಂದ ಮಧಾಹ್ನ 1 ಗಂಟೆಯವರೆಗೆ ಅರ್ಹಂ ವಿಜ್ಞಾ ಅಹಮದನಗರ ಅವರಿಂದ ಜೀವನ ಶೈಲಿ ಕುರಿತು ತರಬೇತಿ ಕಾರ್ಯಾಗಾರ ಸಾಯಂಕಾಲ 4 ಗಂಟೆಗೆ ಚಿತ್ರಕಲಾ ಸ್ಪರ್ಧೆ ಕಾರ್ಯಕ್ರಮಗಳು ನಡೆಯಲಿವೆ ಎಂದು ಅವರು ಹೇಳಿದರು.

ಬುಧವಾರ ಏ.17 ರಂದು ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಮಹಾವೀರ ಭವನದಲ್ಲಿ ವಸ್ತು ಪ್ರದರ್ಶನ, ಉದ್ಯೋಗಸ್ತ ಮಹಿಳೆಯರಿಗಾಗಿ ವ್ಯಾಪಾರ ಮಳಿಗೆ ಮತ್ತು ಸ್ಪರ್ಧೆ ಏರ್ಪಡಿಸಲಾಗಿದೆ. ಅಂದು ಸಾಯಂಕಾಲ ಮಹಿಳೆಯರಿಗಾಗಿ ಗುಂಪು ಭಜನೆ, ಕಲರ್ಸ ಆಫ್ ಇಂಡಿಂಮಾ ಗ್ರುಪ್ ನೃತ್ಯ, ಪಾಕಕಲಾ ಸ್ಪರ್ಧೆ, ಸೀರೆ ವಿನ್ಯಾಸಗಳ ಸ್ಪರ್ಧೆ, ಮಕ್ಕಳಿಗಾಗಿ ಕಸದಿಂದ ರಸ ಸ್ಪರ್ಧೆ, ಸೂಪರ ಹೀರೋ ಸ್ಪರ್ಧೆಗಳು ನಡೆಯಲಿವೆ ಎಂದು ಅವರು ಹೇಳಿದರು.

ಗುರುವಾರ ಏ.18 ರಂದು ಸಾಯಂಕಾಲ 6 ಗಂಟೆಯಿಂದ 9 ಗಂಟೆಯವರೆಗೆ ಮಕ್ಕಳ ಜಿನ ಭಜನಾ ಸ್ಪರ್ಧೆ, ಮಹಿಳೆಯರಿಗೆ ನೃತ್ಯ ಸ್ಪರ್ಧೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳು ನಡೆಯಲಿವೆ. ಶುಕ್ರವಾರ ಏ. 19 ರಂದು ಸಾಯಂಕಾಲ 6 ರಿಂದ 9 ಗಂಟೆಯವರೆಗೆ "ಬ್ರಾಹ್ಮಿ ಇಂದ ಗೊಮ್ಮಟನವರೆಗೆ "ನಾಟಕ ನಡೆಯಲಿದೆ ಎಂದು ಅವರು ತಿಳಿಸಿದರು.

ಏ. 21 ರವಿವಾರದಂದು ಶೋಭಾಯಾತ್ರೆ ನಡೆಯಲಿದೆ. ಅಂದು ಬೆಳಿಗ್ಗೆ 8 ಘಂಟೆಗೆ ಜೈನ ಯುವ ಸಂಘಟನೆ ವತಿಯಿಂದ ಬೃಹತ್ ಬೈಕ ರ್‍ಯಾಲಿ ನಡೆಸಲಾಗುವುದು. ಸಮಾರಂಭಕ್ಕೆ ಮುಖ್ಯ ಅತಿಥಿಯಾಗಿ ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ಉಪ ಕುಪಲತಿ ಪ್ರೋ.ಸಿ.ಎಂ.ತ್ಯಾಗರಾಜ ಗೌರವ ಅತಿಥಿಯಾಗಿ ಪದ್ಮಶ್ರೀ ಪ್ರೋ. ಡಾ> ಮದನ ಗೋಡಬೊಲೆ ಇವರು ಆಗಮಿಸಲಿದ್ದಾರೆ. ಸಮಾದೇವಿ ಗಲ್ಲಿ ಖಡೆಬಜಾರದಿಂದ ಶೋಭಾಯಾತ್ರೆಗೆ ಚಾಲನೆ ನೀಡಲಾಗುವುದು. ಶೋಭಾ ಯಾತ್ರೆ ರಾಮದೇವ ಗಲ್ಲಿ, ರಾಮಲಿಂಗಖಿಂಡ ಗಲ್ಲಿ, ಟಿಳಕಚೌಕ, ಶೇರಿ ಗಲ್ಲಿ, ಶನಿ ಮಂದಿರ, ಎಸ್.ಪಿ.ಎಂ.ರೋಡ, ಕೋರೆ ಗಲ್ಲಿ ಶಹಾಪೂರ, ಹಾಗೂ ಬಸವೇಶ್ವರ ವೃತ್ತದ ಮುಖಾಂತರ ಮಹಾವೀರ ಭವನ ತಲುಪಿ ಶೋಭಾಯಾತ್ರೆ ಮುಕ್ತಾಯಗೊಳ್ಳುವುದು. ,ಮಹಾವೀರ ಭವನದಲ್ಲಿ ಎಲ್ಲ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಗುವುತ್ತದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಿನೋದ ದೊಡ್ಡಣ್ಣವರ, ರಾಜೇಂದ್ರ ಜಕ್ಕನ್ನವರ, ರಾಜು ಖೋಡಾ, ಸಾಗರ ಬೋರಗಲ್ಲ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

## ಬೆಳಗಾವಿಯಲ್ಲಿ ಅಬ್ಬರಿಸಿದ ಅನಿರೀಕ್ಷಿತ ಮಳೆ

ಬೆಳಗಾವಿ: ಬೆಳಗಾವಿ ನಗರದಲ್ಲಿ ಶುಕ್ರವಾರ ಮಧ್ಯಾಹ್ನ ಗುಡುಗು-ಮಿಂಚು ಸಹಿತ ಭಾರಿ ಮಳೆ ಸುರಿಯಿತು. ರಭಸದ ಮಳೆಯಿಂದಾಗಿ ಚರಂಡಿಗಳು ಅಲ್ಲಲ್ಲಿ ಬ್ಲಾಕ್ ಆಗಿ ರಸ್ತೆಗಳ ಮೇಲೆ ನಿಂತ ಪರಿಣಾಮ ವಾಹನ ಸವಾರರು ಪರದಾಡಿದರು.

ಶುಕ್ರವಾರ ಮಧ್ಯಾಹ್ನ 3:45ಕ್ಕೆ ಆರಂಭವಾದ ಮಳೆ ಸತತ 1 ಗಂಟೆಯವರೆಗೂ ಅಬ್ಬರವಾಗಿಯೇ ಸುರಿಯಿತು. ಬೆಳಗಾವಿ ನಗರದ ಬೆಂಡಿ ಬಜಾರ್, ಗಣಪತಿ ಗಲ್ಲಿ, ಖಡೇಬಜಾರ್, ಶಹಾಪುರ, ಗಾಂಧಿ ನಗರ, ಸಮರ್ಥ ನಗರ, ಹಳೇ ಪಿಬಿ ರಸ್ತೆ ಹಾಗೂ ವಿವಿಧ ತಗ್ಗು ಪ್ರದೇಶದಲ್ಲಿರುವ ಅನೇಕ ಮನೆಗಳು, ವ್ಯಾಪಾರ ಮಳಿಗೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಸಿತು.

ಮಳೆ ನೀರಿನಿಂದಾಗಿ ಪ್ರಮುಖ ರಸ್ತೆಗಳು ಬ್ಲಾಕ್ ಆಗಿದ್ದವು. ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್‌ಗಳು ಹಾಗೂ ವಿವಿಧ ಕಡೆ ಸ್ಮಾರ್ಟ್‌ಸಿಟಿ ರಸ್ತೆ ಮತ್ತು ಚರಂಡಿ ಕಾಮಗಾರಿ ಕೈಗೊಂಡಿರುವುದರಿಂದ ಕೆಲವೆಡೆ ಮಳೆ ನೀರು ಹರಿದು ಹೋಗಲು ಆಗಲಿಲ್ಲ. ಕೆಲ ಪ್ರದೇಶದಲ್ಲಿ ಜೋರಾಗಿ ಬೀಸಿದ ಗಾಳಿಗೆ ವಿದ್ಯುತ್ ತಂತಿಗಳು ಒಂದಕ್ಕೊಂದು ತಾಗುತ್ತಿದ್ದರಿಂದ ಬೆಂಕಿ ಕಿಡಿ ಹಾರುತ್ತಿದ್ದವು.



## ಕಣ್ಣಿತ್ತ ಪೂಜ್ಯರು ಕವಿಗೋಷ್ಠಿ ಕವನ ಆಹ್ವಾನ

ಬೆಳಗಾವಿ: ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿ (ರಿ) ಗದಗಅರ್ಪಿಸುವ, ಹಾನಗಲ್ ಗುರುಕುಮಾರ ಮಹಾಸ್ವಾಮಿಗಳ, ಗಾನಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರ, ಪದ್ಮಭೂಷಣಡಾ. ಪಂ. ಪುಟ್ಟರಾಜ ಶಿವಯೋಗಿ ಕವಿ ಗವಾಯಿಗಳವರ ಕುರಿತಾಗಿ ರಚಿಸಿದ ಕಲೆಗೆ ಕಣ್ಣಿತ್ತ ಪೂಜ್ಯರು13 ನೆಯರಾಜ್ಯ ಮಟ್ಟದ ಕವಿಗೋಷ್ಠಿಯು, ದಿನಾಂಕ 12 ಮೇ 2024 ರವಿವಾರ ಬೆಳಗ್ಗೆ 11 ಗಂಟೆಗೆ, ದಾವಣಗೆರೆಯ ಬಾಡಕ್ರಾಸ್‌ನಲ್ಲಿ ಇರುವ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ, ಏರ್ಪಡಿಸಲಾಗಿದೆ. ಪೂಜ್ಯತ್ರಯರಕುರಿತಾಗಿ ರಚಿಸಿದ ಸ್ವರಚಿತ ಕವನ ವಾಚನ ಮಾಡಲು ಆಸಕ್ತ ಕವಿಗಳು ತಮ್ಮ ಹೆಸರು ನೋಂದಾಯಿಸಿ ಕೊಳ್ಳಲು ಕೋರಲಾಗಿದೆ. ಪೂಜ್ಯತ್ರಯರಲ್ಲಿ ಯಾರಾದರೂ ಒಬ್ಬರನ್ನುಕುರಿತು ರಚಿಸಿದ ಸ್ವರಚಿತ ಕವನ ಮಾತ್ರ ವಾಚಿಸಲು ಅವಕಾಶವಿರುತ್ತದೆ. ತಾವು ವಾಚಿಸಲಿರುವಒಂದುಅಥವಾ ಮೂರು ಕವನಗಳನ್ನು ಕಳಿಸಿಕೊಟ್ಟು ಹೆಸರು ನೋಂದಾಯಿಸಿ ಕೊಳ್ಳಬಹುದಾಗಿದೆ. ಆಯ್ಕೆಯಾದ ಕವನಗಳ ಕವಿಗಳನ್ನು ಮಾತ್ರಅಹ್ವಾನಿಸಲಾಗುವುದು.

ಭಾಗವಹಿಸಿದ ಕವಿಗಳಿಗೆ ಅಭಿನಂದನಾ ಪತ್ರ, ಪುಸ್ತಕ ಕಾಣಿಕೆಯೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು.



ದೂರದ ಊರುಗಳಿಂದ ಬರುವ ಕವಿಗಳಿಗೆ ಊಟ ಮತ್ತು ಸಾಮೂಹಿಕ ವಸತಿ ಒದಗಿಸಲಾಗುವುದು. ಭಾಗವಹಿಸಲು ಹೆಸರು, ಅಂಚೆ ವಿಳಾಸ ತಿಳಿಸಿ, ಗುಣಮಟ್ಟದ ಒಂದು ಭಾವಚಿತ್ರದೊಂದಿಗೆ ಶ್ರೀಮತಿ ವಾಣಿ ಬಸವರಾಜ ಕವಿಯತ್ರಿ, ಲೇಖಕಿ, ಆಂಗ್ಲ ಭಾಷಾ ಉಪನ್ಯಾಷಕಿ ದಾವಣಗೆರೆ ಇವರ 9902052121/ 9886717732 ವಾಟ್ಸಾಪ್ ನಂಬರಗೆ ಕಳಿಸಿಕೊಡಬಹುದು ಕರೆಗಳನ್ನು ಸ್ವೀಕರಿಸುವುದಿಲ್ಲ.

ಹೆಸರು ನೋಂದಾಯಿಸಿಕೊಳ್ಳಲು ಕೊನೆಯ ದಿನಾಂಕ 30 ಏಪ್ರಿಲ್ 2023. ಆಗಿದೆ ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿರಾಜ್ಯ ಸಂಘಟನಾ ಕಾರ್ಯದರ್ಶಿ ಶಿವಬಸಯ್ಯಪಂ. ಚರಂತಿಮಠ ದಾವಣಗೆರೆ ಇವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ನಿರಾಣಿ ಹೇಳಿಕೆ ಖಂಡಿಸಿ ಬೆಳಗಾವಿಯಲ್ಲಿ ಪಂಚಮಸಾಲಿ ಸಮಾಜದ ಪ್ರತಿಭಟನೆ




ಬೆಳಗಾವಿ: ಕೂಡಲ ಸಂಗಮ ಪಂಚಮಸಾಲಿ ಸಮಾಜದ ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿಗೆ ಬ್ಲ್ಯಕ್ ಮೇಲ್ ತಂತ್ರ ಹಾಗೂ ನಮ್ಮ ಸಮಾಜದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಹಗುರವಾಗಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಮುರುಗೇಶ ನಿರಾಣಿ ಹೇಳಿಕೆ ನೀಡಿರುವುದನ್ನು ಖಂಡಿಸಿ ಶುಕ್ರವಾರ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾ ಮುಖಂಡರು ಪ್ರತಿಭಟನೆ ನಡೆಸಿ ನಿರಾಣಿ ಫೋಟೋ ಹರಿದು ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಕೂಡಲಸಂಗಮ ಪಂಚಮಸಾಲಿ ಜಗದ್ಗುರು ಶ್ರೀ ಬಸವ ಜಯಮೃತ್ಯುಂಜಯ ಸ್ವಾಮೀಜಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ವಿರುದ್ಧ ಇನ್ನೊಂದು ಬಾರಿ ನಿರಾಣಿಗೆ ಎಚ್ಚರಿಕೆ ನೀಡಿದರು.

ಮುರುಗೇಶ ನಿರಾಣಿ ನಮ್ಮ ಸಮಾಜದ ವ್ಯಕ್ತಿಯಾಗಿ ನಮಗೆ ನ್ಯಾಯ ಕೊಡಿಸಲು ಆಗಲಿಲ್ಲ. ಆದರೆ ನಮ್ಮ ಸಮಾಜದವರಿಗೆ ಅವಮಾನ ಮಾಡುವುದು ಸರಿಯಲ್ಲ ಎಂದು ಹರಿಹಾಯ್ದರು.

## ಸ್ವಿಮ್ಮಿಂಗ್ ಪೂಲ್ ನೀರಿಗೆ ಬಿದ್ದು 4ನೇ ತರಗತಿ ವಿದ್ಯಾರ್ಥಿ ಸಾವು

ಉಡುಪಿ: ಸ್ವಿಮ್ಮಿಂಗ್ ಪೂಲ್ನಲ್ಲಿ ಮುಳುಗಿ 4ನೇ ತರಗತಿಯ ವಿದ್ಯಾರ್ಥಿ ಸಾವನ್ನಪ್ಪಿರುವ ಘಟನೆ ಕುಂದಾಪುರ ತಾಲೂಕಿನ ಹೆಂಗವಳ್ಳಿ ಸಮೀಪದ ಟಿನ್ ಟಾನ್ ಎನ್ವೆಂಚರ್ಸ್ ರೆಸಾರ್ಟ್ನಲ್ಲಿ ನಡೆದಿದೆ.



ಉಡುಪಿಯ ಹೊಡೆ ಮೂಲದ ಮುಹಮ್ಮದ್ ಅರೀಝ್ (10) ಮೃತ ವಿದ್ಯಾರ್ಥಿ. ದಾರುಸ್ಸಲಾಮ್ ಇಂಗ್ಲಿಷ್ ಮೀಡಿಯಂ ಶಾಲೆಯ ವಿದ್ಯಾರ್ಥಿ ಕುಟುಂಬ ಸದಸ್ಯರೊಂದಿಗೆ ಪ್ರವಾಸಕ್ಕೆ ಬಂದಿದ್ದನು. ಆದರೆ ರೆಸಾರ್ಟ್ನ ಸ್ವಿಮ್ಮಿಂಗ್ ಪೂಲ್ನ ನೀರಿನಲ್ಲಿ ಬಿದ್ದು ಅಸ್ವಸ್ಥನಾಗಿದ್ದನು. ತಕ್ಷಣ ಬಾಲಕನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಅರೀಝ್ ಮೃತಪಟ್ಟಿದ್ದಾನೆ. ಸದ್ಯ ಈ ಸಂಬಂಧ ಬಾಲಕನ ಪೋಷಕರು ಟಿನ್ ಟಾನ್ ಎನ್ವೆಂಚರ್ಸ್ ರೆಸಾರ್ಟ್ ವಿರುದ್ಧ ದೂರು ದಾಖಲಿಸಿದ್ದಾರೆ.

# ಕಬ್ಬಿನ ಬಾಕಿ ಬಿಲ್: ತಕ್ಷಣವೇ ಪಾವತಿಸಲು ಸಕ್ಕರೆ ಕಾರ್ಖಾನೆಗಳಿಗೆ ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಬರಗಾಲ ಹಾಗೂ ಸಾರ್ವತ್ರಿಕ ಲೋಕಸಭಾ ಚುನಾವಣೆ ಇರುವುದರಿಂದ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಯವರು ಕೂಡಲೇ ನಿಯಮಾನುಸಾರ ರೈತರಿಗೆ ಬಿಲ್ಲನ್ನು ಸಂದಾಯ ಮಾಡಿ ಜಿಲ್ಲಾಧಿಕಾರಿ ಕಚೇರಿಗೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

2023-24 ನೇ ಸಾಲಿನ ಹಂಗಾಮಿಗೆ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರಿಗೆ ತ್ವರಿತವಾಗಿ ಬಿಲ್ ಪಾವತಿಸಲು ಸೂಚಿಸಲಾಗಿತ್ತು. ಆದರೂ ಕೆಲವು ಸಕ್ಕರೆ ಕಾರ್ಖಾನೆಯವರು ಪಾವತಿಸಿರುವುದಿಲ್ಲ.

ಜಿಲ್ಲೆಯ 28 ಸಕ್ಕರೆ ಕಾರ್ಖಾನೆಗಳ ಪೈಕಿ 15 ಕಾರ್ಖಾನೆಯವರು ಈಗಾಗಲೇ ಶೇ. 100 ರಷ್ಟು ಮೊತ್ತ ರೈತರಿಗೆ ಪಾವತಿಸಿದ್ದು, ಇನ್ನು 13 ಸಕ್ಕರೆ ಕಾರ್ಖಾನೆಯವರು ಬಿಲ್ ಪಾವತಿಸುವುದು ಬಾಕಿ ಉಳಿಸಿಕೊಂಡಿರುವ ಕಾರಣ ಸಕ್ಕರೆ ನಿರ್ದೇಶಕರು ಹಾಗೂ ಕಬ್ಬು ಅಭಿವೃದ್ಧಿ ಆಯುಕ್ತರು ಕಾರ್ಖಾನೆಯವರಿಗೆ ಈಗಾಗಲೇ ಅಂತಿಮ ನೋಟಿಸ್ ಜಾರಿ ಮಾಡಿರುತ್ತಾರೆ.

ಕಬ್ಬು (ನಿಯಂತ್ರಣ) ಆದೇಶ-1966 ರ ಕಲಂ 3(3)ಎ ಪ್ರಕಾರ ಮತ್ತು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ 2013 ಹಾಗೂ ತಿದ್ದುಪಡಿ ಅಧಿನಿಯಮ 2014 ರನ್ವಯ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ 14 ದಿನಗಳೊಳಗಾಗಿ ಕಬ್ಬಿನ ಬಿಲ್ ಪಾವತಿಸದಿದ್ದಲ್ಲಿ, ನಂತರದ ಅವಧಿಗೆ ವಾರ್ಷಿಕ ಶೇ. 15 ರ ಬಡ್ಡಿಯೊಂದಿಗೆ ಪಾವತಿಸಬೇಕಿರುತ್ತದೆ.



ಕಬ್ಬು ಪೂರೈಸಿದ ರೈತರು ಬಾಕಿ ಬಿಲ್ ತ್ವರಿತವಾಗಿ ಪಾವತಿಸಲು ವಿನಂತಿಸಿಕೊಂಡಿದ್ದು, ಕೂಡಲೇ ಬಿಲ್ ಪಾವತಿಸಿ ವರದಿಯನ್ನು ಜಿಲ್ಲಾಧಿಕಾರಿ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಒಂದು ವೇಳೆ ರೈತರಿಗೆ ಬಿಲ್ ಪಾವತಿಸಲು ವಿಳಂಬವಾದಲ್ಲಿ ಅಂತಹ ಕಾರ್ಖಾನೆಗಳ ಮೇಲೆ ನಿಯಮಾನುಸಾರ ಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಎಚ್ಚರಿಕೆ ನೀಡಿದ್ದಾರೆ.

**2023-24ನೇ ಸಾಲಿನ ಅಂತ್ಯಕ್ಕೆ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಗಳ ವಿವರ:**

ಹುಕ್ಕೇರಿ ತಾಲೂಕಿನ ಸಂಕೇಶ್ವರ ಹಿರಣ್ಯಕೇಶಿ ಸಹಕಾರ ಸಕ್ಕರೆ ಕಾರ್ಖಾನೆ ನಿ.(10031 ಲಕ್ಷ), ಅಥಣಿ ತಾಲೂಕು ಹಳಿಯಾಳ ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿ. (1981 ಲಕ್ಷ), ಬೈಲಹೊಂಗಲ ತಾಲೂಕಿನ ಎಂ.ಕೆ ಹುಬ್ಬಳ್ಳಿಯ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ. (2354 ಲಕ್ಷ), ಬೈಲಹೊಂಗಲ ತಾಲೂಕಿನ ಸಿದ್ದಸಮುದ್ರ ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ.(2001 ಲಕ್ಷ), ಹುಕ್ಕೇರಿ ತಾಲೂಕು ಹಿಡ್ಕಲ್ ಡ್ಯಾಂನ ಸಂಗಮ ಸಹಕಾರಿ ಸಕ್ಕರೆ ಕಾರ್ಖಾನೆ ನಿ.(3233 ಲಕ್ಷ), ಕಾಕತಿಯ ಮಾರ್ಕಂಡೇಯ ಸಹಕಾರ ಸಕ್ಕರೆ ಕಾರ್ಖಾನೆ ನಿ.(631 ಲಕ್ಷ), ಅಥಣಿ ತಾಲೂಕಿನ ಅಥಣಿ ಶುಗರ್ಸ್ ಲಿ.(6784 ಲಕ್ಷ), ಬೆಳಗಾವಿ ತಾಲೂಕಿನ ಹುದಲಿಯ ಬೆಳಗಾಂ ಶುಗರ್ಸ್ ಪ್ರೈವೇಟ್ ಲಿ.(4679 ಲಕ್ಷ), ಸವದತ್ತಿ ತಾಲೂಕಿನ ಹರ್ಷ ಶುಗರ್ಸ್ ಲಿ.(220 ಲಕ್ಷ), ಗೋಕಾಕ್ ಸತೀಶ್ ಶುಗರ್ಸ್ ಎಲ್.ಟಿ.ಡಿ (5909 ಲಕ್ಷ), ಖಾನಾಪೂರ ರಸ್ತೆಯ ಶಿರಾಗುಪ್ಪಿ ಶುಗರ್ ವರ್ಕ್ಸ ಲಿ.(1225 ಲಕ್ಷ), ಅಥಣಿ ತಾಲೂಕಿನ ಉಗಾರ್ ಖುರ್ದ್ ನ ಉಗಾರ ಶುಗರ್ಸ್ ಲಿ.(9901 ಲಕ್ಷ), ಹುಕ್ಕೇರಿ ತಾಲೂಕಿನ ವಿಶ್ವರಾಜ ಶುಗರ್ಸ್ ಇಂಡಸ್ಟ್ರೀಸ್ ಲಿ.(1900 ಲಕ್ಷ), ಕಾರ್ಖಾನೆಗಳು ಬಾಕಿ ಬಿಲ್ ಪಾವತಿಸಬೇಕಾಗಿರುತ್ತದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089